# ಮೈಸೂರು ವಿಶ್ವವಿದ್ಯಾನಿಲಯ

**ಮೈಸೂರು ವಿಶ್ವವಿದ್ಯಾನಿಲಯದ ಕ್ರಾಫರ್ಡ್ ಭವನದ ಸಿಂಡಿಕೇಟ್ ಸಭಾಂಗಣದಲ್ಲಿ ದಿನಾಂಕ: 27-03-2023 ಸೋಮವಾರದಂದು ಪೂರ್ವಾಹ್ನ 11.30 ಗಂಟೆಗೆ ನಡೆದ "ಸಿಂಡಿಕೇಟಿನ ಎರಡನೇ ಸಾಮಾನ್ಯ ಸಭೆ"ಯ ನಡವಳಿಗಳು.**

**<u>ಉಪಸ್ಥಿತರು:</u>**

| | | |
|---|---|---|
| 1. | ಪ್ರೊ. ಎನ್.ಕೆ. ಲೋಕನಾಥ್ | ಕುಲಪತಿ ಹಾಗೂ ಅಧ್ಯಕ್ಷರು |
| 2. | ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ ಇವರ ಪರವಾಗಿ ಶ್ರೀ ಲಕ್ಷ್ಮಣ್ ಅಯ್ಯಪ್ಪ ಕುಲಗೋಡ್ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಮೈಸೂರು. | ಸದಸ್ಯರು |
| 3. | ಪ್ರೊ. ಮುಝಾಫರ್ ಹೆಚ್. ಅಸ್ಸಾದಿ | ಸದಸ್ಯರು |
| 4. | ಶ್ರೀ ಎಂ.ಬಿ. ಗಪ್ಪಣ್ಣ | ಸದಸ್ಯರು |
| 5. | ಡಾ. ಚೈತ್ರ ನಾರಾಯಣ | ಸದಸ್ಯರು |
| 6. | ಡಾ. ನಿರ್ಮಲ ಹೆಚ್.ಎಂ. | ಸದಸ್ಯರು |
| 7. | ಶ್ರೀಮತಿ ಸೌಮ್ಯ ಈರಪ್ಪ ಕೆ. | ಸದಸ್ಯರು |
| 8. | ಡಾ. ಜಯಶಂಕರ್ ಎನ್ | ಸದಸ್ಯರು |
| 9. | ಪ್ರೊ. ಎ.ಪಿ. ಜ್ಞಾನ ಪ್ರಕಾಶ್, ಕುಲಸಚಿವರು (ಪರೀಕ್ಷಾಂಗ) | ಸದಸ್ಯರು |
| 10. | ಶ್ರೀಮತಿ ಶೈಲಜ ವಿ.ಆರ್., ಕೆಎಎಸ್ | ಕುಲಸಚಿವೆ ಹಾಗೂ ಸದಸ್ಯ ಕಾರ್ಯದರ್ಶಿ |
| 11. | ಡಾ. ಸಂಗೀತಾ ಗಜಾನನ್ ಭಟ್, ಹಣಕಾಸು ಅಧಿಕಾರಿಗಳು | ವಿಶೇಷ ಆಹ್ವಾನಿತರು |

**<u>ಅನುಪಸ್ಥಿತರು:</u>**

1. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.
2. ಶ್ರೀ ಎಸ್.ಹೆಚ್.ಗಂಗೇಗೌಡ
3. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.
4. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.
5. ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.

ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರು ಸಭೆಯಲ್ಲಿ ಉಪಸ್ಥಿತರಿದ್ದ ಎಲ್ಲಾ ಸಿಂಡಿಕೇಟ್ ಸದಸ್ಯರುಗಳನ್ನು ಹೃತ್ಪೂರ್ವಕವಾಗಿ ಸಭೆಗೆ ಸ್ವಾಗತಿಸಿದರು.

ಮೊದಲಿಗೆ, ಹೊಸದಾಗಿ ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿಗಳಾಗಿ ಅಧಿಕಾರವನ್ನು ವಹಿಸಿಕೊಂಡಿರುವ ಪ್ರೊ. ಎನ್.ಕೆ.ಲೋಕನಾಥ್, ಪ್ರಾಧ್ಯಾಪಕರು, ಭೌತಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಹಾಗೂ ನಿರ್ದೇಶಕರು, ಯೋಜನೆ, ಉಸ್ತುವಾರಿ ಮತ್ತು ಮೌಲ್ಯಮಾಪನ ಮಂಡಳಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರನ್ನು ಸ್ವಾಗತಿಸಲಾಯಿತು.

ನಂತರ, ಪ್ರೊ. ಮುಜಾಫರ್ ಹೆಚ್. ಅಸ್ಸಾದಿ, ಪ್ರಭಾರ ಕುಲಪತಿಗಳು, ಪ್ರಾಧ್ಯಾಪಕರು ಹಾಗೂ ಡೀನರು, ಕಲಾ ನಿಕಾಯ, ರಾಜ್ಯಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರ ಸೇವೆಯನ್ನು ಸ್ಮರಿಸಲಾಯಿತು

ಹಾಗೂ

ಪ್ರೊ. ಜಿ. ವೆಂಕಟೇಶ್‌ಕುಮಾರ್, ಪ್ರಾಧ್ಯಾಪಕರು, ಮನಃಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರ ಸಿಂಡಿಕೇಟ್ ಸದಸ್ಯತ್ವದ ಅವಧಿಯು ದಿನಾಂಕ:09.03.2023 ರಂದು ಮುಕ್ತಾಯಗೊಂಡಿರುವುದರಿಂದ ಹಾಗೂ ಶ್ರೀಮತಿ ಪವಿತ್ರ.ವೈ.ಕೆ., ಸಿಂಡಿಕೇಟ್ ಸದಸ್ಯರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರ ಸಿಂಡಿಕೇಟ್ ಸದಸ್ಯತ್ವದ

ಅವಧಿಯು ದಿನಾಂಕ: 16.03.2023 ರಂದು ಮುಕ್ತಾಯಗೊಂಡಿರುವುದರಿಂದ ಇವರುಗಳ ಸೇವೆಯನ್ನು ಸ್ಮರಿಸಲಾಯಿತು.

ಮಾನ್ಯ ಕುಲಪತಿಯವರು ಸಭೆಯಲ್ಲಿದ್ದ ಎಲ್ಲರಿಗೂ ನಮಸ್ಕಾರಗಳನ್ನು ತಿಳಿಸುತ್ತಾ, ಸಭೆಯು ಪ್ರಾರಂಭವಾಗುವ ಮುನ್ನ ಈ ಕೆಳಕಂಡಂತೆ ಪ್ರಸ್ತಾಪಿಸಿದರು.

ಮೈಸೂರು ವಿಶ್ವವಿದ್ಯಾನಿಲಯದಲ್ಲಿ ನಾನು ವಿದ್ಯಾರ್ಥಿಯಾಗಿ, ಎಂ.ಎಸ್ಸಿ., ಪಿಹೆಚ್.ಡಿ ಪದವಿ ಪೂರ್ಣಗೊಳಿಸಿದ ನಂತರ ಹೊರದೇಶದಲ್ಲಿ ಪೋಸ್ಟ್ ಡಾಕ್ಟೋರಲ್ ಮುಗಿಸಿ, ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಕೆಲಸಕ್ಕೆ ವರದಿ ಮಾಡಿಕೊಂಡು ಪಿ.ಎಂ.ಇ.ಬಿ., ಸಿ.ಡಿ.ಸಿ., ಮೈಸೂರು ವಿಶ್ವವಿದ್ಯಾನಿಲಯದ ಹಲವು ವಿಭಾಗದಲ್ಲಿ ಕೆಲಸ ಮಾಡಿರುತ್ತೇನೆ. ಈಗ ನನಗೆ ವಿಶ್ವವಿದ್ಯಾನಿಲಯ ಅತ್ಯುನ್ನತ್ತ ಹುದ್ದೆ ನೀಡಿರುವುದಕ್ಕೆ ಬಹಳ ಸಂತಸವಾಗಿದೆ. ಈ ಸಂದರ್ಭದಲ್ಲಿ ಕುಲಪತಿ ಹುದ್ದೆಗೆ ನೇಮಕ ಮಾಡಿರುವ ಮಾನ್ಯ ಕುಲಾಧಿಪತಿಗಳು, ಮತ್ತು ಮಾನ್ಯ ಮುಖ್ಯ ಮಂತ್ರಿಗಳು ಮತ್ತು ಮಾನ್ಯ ಉನ್ನತ ಶಿಕ್ಷಣ ಸಚಿವರಿಗೆ ಧನ್ಯವಾದಗಳನ್ನು ಅರ್ಪಿಸುತ್ತೇನೆ ಹಾಗೂ ನಾನು ಅವರಿಗೆಲ್ಲರಿಗೂ ಅಬಾರಿಯಾಗಿದ್ದೇನೆ. ನನ್ನ ಮೇಲೆ ಬಾರಿ ಭರವಸೆಯಿಟ್ಟು ಈ ಜವಾಬ್ದಾರಿಯನ್ನು ನೀಡಿದ್ದಾರೆ. ಅವರು ಇಟ್ಟಿರುವ ಭರವಸೆಯನ್ನು ನಾನು ಉಳಿಸಿಕೊಳ್ಳುವುದಕ್ಕೆ ಪ್ರಯತ್ನ ಮಾಡುತ್ತೇನೆ. ಮೈಸೂರು ವಿಶ್ವವಿದ್ಯಾನಿಲಯವು ಶತಮಾನವನ್ನು ಪೂರೈಸಿರುವ ಪ್ರತಿಷ್ಠಿತ ವಿಶ್ವವಿದ್ಯಾನಿಲಯವಾಗಿದ್ದು, ಈ ವಿಶ್ವವಿದ್ಯಾನಿಲಯವನ್ನು ಉನ್ನತ ಮಟ್ಟಕ್ಕೆ ತರಲು ಮನಸಾರೆ ಪ್ರಯತ್ನ ಪಡುತ್ತೇನೆ. ಕಳೆದ ನಾಲ್ಕು ವರ್ಷಗಳಿಂದ ಪಿ.ಎಂ.ಇ.ಬಿ ಮತ್ತು ಸಿ.ಡಿ.ಸಿ., ನಿರ್ದೇಶಕನಾಗಿ ಬಹಳ ಹತ್ತಿರದಿಂದ ವಿಶ್ವವಿದ್ಯಾನಿಲಯದ ಆಗುಹೋಗುಗಳನ್ನು ಕಂಡಿದ್ದೇನೆ. ಆದ್ದರಿಂದ ನನ್ನ ಮೊದಲನೇ ಆದ್ಯತೆ ಗುಣಮಟ್ಟ ರಕ್ಷಿಸುವುದು ಮತ್ತು ಹೆಚ್ಚಿಸುವುದು. ಹಾಗೆಯೇ ಇನ್ನೊಂದು ಸಂತೋಷದ ವಿಚಾರವೆಂದರೆ ನಾನು ಮಲೆನಾಡು ತೀರ್ಥಹಳ್ಳಿಯಿಂದ ಬಂದವನು. ಈ ವಿ.ವಿ.ಯಲ್ಲಿ ರಾಷ್ಟ್ರಕವಿ ಕುವೆಂಪುರವರು ಸೇವೆ ಸಲ್ಲಿಸಿದ್ದು, ಅಲ್ಲಿಂದ (ತೀರ್ಥಹಳ್ಳಿ) ನನ್ನಂತಹವರಿಗೆ ಮತ್ತೊಮ್ಮೆ ಈ ಅವಕಾಶ ಕೊಟ್ಟಿರುವುದು ಬಹಳ ಖುಷಿ ತಂದಿದೆ. ಜೊತೆಗೆ ಮಾತೃ ವಿಭಾಗವಾದ ಭೌತಶಾಸ್ತ್ರ ಅಧ್ಯಯನ ವಿಭಾಗ ಈಗಾಗಲೇ ಅನೇಕ ಕುಲಪತಿಗಳನ್ನು ನೀಡಿದೆ. ಅವರಲ್ಲಿ ನಮ್ಮ ಗುರುಗಳು ಹಾಗೂ ಮಾರ್ಗದರ್ಶಕರಾದ ಪ್ರೊ. ಜೆ. ಶಶಿಧರ ಪ್ರಸಾದ್‌ರವರು ಕುಲಪತಿಯಾಗಿದ್ದರು. ಮಾನ್ಯರು ನಿರ್ವಹಿಸಿದ ಹುದ್ದೆಯಲ್ಲಿ ಕಾರ್ಯನಿರ್ವಹಿಸಲು ಅತೀವ ಸಂತೋಷವಾಗುತ್ತಿದೆ. ಈ ಹುದ್ದೆಯನ್ನು ನಾನು ಭಾರಿ ಸಂತೋಷದಿಂದ ವಹಿಸಿಕೊಂಡಿದ್ದೇನೆ. ಆದ್ದರಿಂದ ನನ್ನ ಮೂಲ ಉದ್ದೇಶ ವಿಶ್ವವಿದ್ಯಾನಿಲಯದ ಎಲ್ಲಾ ವಿಧದಲ್ಲೂ ಮುಂದೆ ತರುವುದು. ಅದರಲ್ಲೂ ಶೈಕ್ಷಣಿಕ ಮತ್ತು ಸಂಶೋಧನಾತ್ಮಕ ಚಟುವಟಿಕೆಗಳಿಗೆ ಆದ್ಯತೆ ನೀಡಲಾಗುವುದು. ಹಿಂದಿನ ಕುಲಪತಿಗಳು ಪ್ರಾರಂಭಿಸಿರುವ ಇಂಜಿನಿಯರಿಂಗ್ ಕಾಲೇಜು ತುಂಬಾ ಚೆನ್ನಾಗಿ ನಡೆಯುತ್ತಿದೆ. ಕಾಲೇಜಿನ ಗುಣಮಟ್ಟ ಮತ್ತು ಪ್ರವೇಶಾತಿಯನ್ನು ಹೆಚ್ಚಿಸುವುದು. ಅದಕ್ಕಾಗಿ ಮಾನ್ಯ ಸಿಂಡಿಕೇಟ್ ಸದಸ್ಯರುಗಳು / ಶಿಕ್ಷಣ ಮಂಡಳಿ ಸದಸ್ಯರುಗಳು / ಅಧ್ಯಾಪಕರುಗಳು / ಸಂಶೋಧಕರುಗಳು / ವಿದ್ಯಾರ್ಥಿಗಳು ಹಾಗೂ ಅಧ್ಯಾಪಕೇತರ ಉದ್ಯೋಗಿಗಳು ಎಲ್ಲರೂ ಸಹಕಾರ ಕೊಡುತ್ತೀರೆಂದು ಭರವಸೆ ಇದೆ. ಎಲ್ಲರೂ ಒಗ್ಗಟ್ಟಾಗಿ ಕೆಲಸ ಮಾಡಿ ನಮ್ಮ ವಿಶ್ವವಿದ್ಯಾನಿಲಯವನ್ನು ಉನ್ನತ ಮಟ್ಟಕ್ಕೆ ತೆಗೆದುಕೊಂಡು ಹೋಗಲು ನನ್ನ ಪ್ರಯತ್ನವನ್ನು ನಾನು ಮಾಡುತ್ತೇನೆ. ಅದಕ್ಕೆ ತಮ್ಮೆಲ್ಲರ ಸಹಕಾರ ಬೇಕು. ಈ ಸಹಕಾರದೊಂದಿಗೆ ನನ್ನ ಮೊದಲನೇ ಸಿಂಡಿಕೇಟ್ ಸಭೆಯ ವಿಷಯಗಳನ್ನು ಚರ್ಚೆ ಮಾಡೋಣ. ಮೈಸೂರು ವಿಶ್ವವಿದ್ಯಾನಿಲಯವು 100 ವರ್ಷಗಳ ಹಿಂದೆಯೇ ಸ್ಥಾಪಿಸಲ್ಪಟ್ಟ ಮತ್ತು ಮಾದರಿ ವಿಶ್ವವಿದ್ಯಾನಿಲಯವಾಗಿದೆ. ಏಕೆಂದರೆ ಉನ್ನತ ಶಿಕ್ಷಣಕ್ಕೆ ಸಂಬಂಧಿಸಿದಂತೆ ಏನೇ ಸಭೆಯನ್ನು ಏರ್ಪಡಿಸಿದ್ದರೂ ಮೊದಲು ಮೈಸೂರು ವಿಶ್ವವಿದ್ಯಾನಿಲಯವೇ ಪ್ರಸ್ತುತಪಡಿಸಬೇಕೆನ್ನುತ್ತಾರೆ. ಹೀಗಾಗಿ ಮೈಸೂರು ವಿಶ್ವವಿದ್ಯಾನಿಲಯವನ್ನು ರೋಲ್ ಮಾಡೆಲ್ ಎಂದು ಪರಿಗಣಿಸಲಾಗಿದೆ. ನಮ್ಮ ಸಿಂಡಿಕೇಟ್

ಅನ್ನು ರೋಲ್ ಮಾಡೆಲ್ ಮಾಡಿಕೊಂಡಿರುವುದನ್ನು ಪರಿಗಣಿಸಿ ಸಿಂಡಿಕೇಟ್ ಸಭೆಯಲ್ಲಿ ವಿಷಯಾಧಾರಿತ ಚರ್ಚೆಗಳನ್ನು ಮಾಡಿ ಒಳ್ಳೆಯ ಕೆಲಸಗಳನ್ನು ಮಾಡೋಣ. ಈಗಾಗಲೇ ನೂತನ ವಿಶ್ವವಿದ್ಯಾನಿಲಯಗಳು ಸ್ಥಾಪನೆಯಾಗಿವೆ. ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಆನ್‌ಲೈನ್ live streaming ಇರುವುದರಿಂದ ನಾವು ಹೇಗೆ ಮಾರ್ಗದರ್ಶನ ಮಾಡಬೇಕು ಹಾಗೂ ಏನು ಮಾಡುತ್ತಾ ಇದ್ದೇವೆ ಎನ್ನುವುದು ಗೊತ್ತಾಗುತ್ತದೆ. ಆದ್ದರಿಂದ ಹೇಗೆ ವಿಶ್ವವಿದ್ಯಾನಿಲಯದಲ್ಲಿ ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸಬಹುದೆಂದು ಸಿಂಡಿಕೇಟ್ ಸಭೆಯಲ್ಲಿ ವಿಷಯಗಳಿಗೆ ಸಂಬಂಧಿಸಿದಂತೆ ಮುಕ್ತವಾಗಿ ಚರ್ಚಿಸೋಣ. ನಂತರ ಇತರೆ ವಿಷಯಗಳ ಬಗ್ಗೆ ಚರ್ಚೆ ಮಾಡೋಣವೆಂದು ತಿಳಿಸುತ್ತಾ, ಕುಲಸಚಿವರಿಗೆ ಕಾರ್ಯಸೂಚಿಯನ್ನು ಮಂಡಿಸಬೇಕೆಂದು ತಿಳಿಸಿದರು.

| **ವಿಷಯ ಸಂಖ್ಯೆ** | **ವಿಷಯ ಸಂಕ್ಷಿಪ್ತವಾಗಿ** |
|---|---|
| 1. ದಿನಾಂಕ: 03-02-2023ರಂದು ಜರುಗಿದ "ಸಿಂಡಿಕೇಟಿನ ಮೊದಲನೇ ಸಾಮಾನ್ಯ ಸಭೆ"ಯ ನಡವಳಿಯನ್ನು ದೃಢೀಕರಿಸುವ ಬಗ್ಗೆ.<br>2. ದಿನಾಂಕ: 16-02-2023ರಂದು ನಡೆದ "ಸಿಂಡಿಕೇಟಿನ ವಿಶೇಷ ಸಭೆ"ಯ ನಡವಳಿಯನ್ನು ದೃಢೀಕರಿಸುವ ಬಗ್ಗೆ.<br>3. ದಿನಾಂಕ: 06-03-2023ರಂದು ನಡೆದ "ಸಿಂಡಿಕೇಟಿನ ವಿಶೇಷ ಸಭೆ"ಯ ನಡವಳಿಯನ್ನು ದೃಢೀಕರಿಸುವ ಬಗ್ಗೆ. | |

**ದಿನಾಂಕ : 03-02-2023ರಂದು ನಡೆದ "ಮೊದಲನೇ ಸಾಮಾನ್ಯ ಸಿಂಡಿಕೇಟ್ ಸಭೆ"ಯ ವಿಷಯ ಸಂಖ್ಯೆ : 2023/1.19 ಹಾಗೂ 2023/1.31ರ ವಿಷಯಗಳನ್ನು ತಿದ್ದುಪಡಿ / ಸೇರ್ಪಡೆ ಮಾಡಿದ ಅಂಶಗಳನ್ನು ದೃಢೀಕರಿಸುವ ಬಗ್ಗೆ.**

ಮುಚ್ಚಳಿಕೆ ಪಡೆದು ಬಳಿಕ ಹಂಚಿಕೆ ಮಾಡುವುದು ಸೂಕ್ತವೆಂದು ಹಣಕಾಸು ಅಧಿಕಾರಿಯವರು ತಿಳಿಸಿದರು ಎಂದು ನಡವಳಿಯಲ್ಲಿ ತಿಳಿಸಿರುತ್ತಾರೆ. ಆದರೆ ಈ ಮಾತನ್ನು ಮಾನ್ಯ ಕುಲಸಚಿವರು ಮತ್ತು ಪ್ರೊ. ಜಿ. ವೆಂಕಟೇಶ್ ಕುಮಾರ್‌ರವರು ಮುಚ್ಚಳಿಕೆ ಪಡೆದು ಬಳಿಕ ಹಂಚಿಕೆ ಮಾಡುವುದು ಸೂಕ್ತವೆಂದು ತಿಳಿಸಿರುವುದನ್ನು ದೃಢೀಕರಿಸಲಾಗಿದೆ.

| **ತೀರ್ಮಾನ** | **ತಿದ್ದುಪಡಿ** |
|---|---|
| ಪಿಹೆಚ್.ಡಿ 2010ರ ನಿಯಮಾವಳಿಯ ಪ್ರಕಾರ ವಿವಿಧ ವಿಷಯಗಳ ಮಾರ್ಗದರ್ಶಕರ ಬಳಿ ಸಂಶೋಧನಾ ಕಾರ್ಯವನ್ನು ನಿರ್ವಹಿಸುತ್ತಿದ್ದ 18 ಸಂಶೋಧನಾ ವಿದ್ಯಾರ್ಥಿಗಳು ದಿನಾಂಕ: 31-12-2022 ರೊಳಗೆ ಕಾರಣಾಂತರಗಳಿಂದ ಮಹಾಪ್ರಬಂಧವನ್ನು ಸಲ್ಲಿಸಿರುವುದಿಲ್ಲ. ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ ಒಂದು ಬಾರಿ ಮಾತ್ರ ದಿನಾಂಕ:01-01-2023ರಿಂದ ಅನ್ವಯವಾಗುವಂತೆ ಆರು ತಿಂಗಳು ಕಾಲಾವಕಾಶವನ್ನು ಮಾತ್ರ ವಿಸ್ತರಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು. | ಪಿಹೆಚ್.ಡಿ 2010ರ ನಿಯಮಾವಳಿಯ ಪ್ರಕಾರ ವಿವಿಧ ವಿಷಯಗಳ ಮಾರ್ಗದರ್ಶಕರ ಬಳಿ ಸಂಶೋಧನಾ ಕಾರ್ಯವನ್ನು ನಿರ್ವಹಿಸುತ್ತಿದ್ದ 18 ಸಂಶೋಧನಾ ವಿದ್ಯಾರ್ಥಿಗಳು ದಿನಾಂಕ: 31-12-2022ರೊಳಗೆ ಕಾರಣಾಂತರಗಳಿಂದ ಮಹಾ ಪ್ರಬಂಧವನ್ನು ಸಲ್ಲಿಸಿರುವುದಿಲ್ಲ. ಈ ಸಂಬಂಧ ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ ಒಂದು ಭಾರಿ ಮಾತ್ರ ರೂ.50,000/- (ರೂ. ಐವತ್ತು ಸಾವಿರ ರೂಪಾಯಿಗಳು ಮಾತ್ರ)ಗಳ ವಿಶೇಷ ದಂಡ ಶುಲ್ಕದೊಂದಿಗೆ ದಿನಾಂಕ: 01.01.2023 ರಿಂದ ಅನ್ವಯವಾಗುವಂತೆ ಆರು ತಿಂಗಳುಗಳ ಕಾಲಾವಕಾಶವನ್ನು ಮಾತ್ರ ವಿಸ್ತರಿಸಲಾಗಿದೆ. |

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ 16.02.2023 ರಂದು ನಡೆದ **ವಿಶೇಷ ಸಿಂಡಿಕೇಟ್ ಸಭೆಯ ಇತರೆ ವಿಷಯ ಸಂಖ್ಯೆ ಎರಡಕ್ಕೆ ಸಂಬಂಧಿಸಿದಂತೆ,** ಮಾನ್ಯ ಕುಲಪತಿಗಳು, ಪ್ರಸ್ತುತ ನೀಡಿರುವ ಆದೇಶವನ್ನು ಹಿಂಪಡೆದು ವಿಶ್ವವಿದ್ಯಾನಿಲಯಕ್ಕೆ ಯಾವುದೇ ಆರ್ಥಿಕ ಹೊರೆ ಇಲ್ಲದಿರುವುದರಿಂದ ಪದನಾಮ ಬದಲಾವಣೆ ಮಾಡಿರುವ ಯಥಾಸ್ಥಿತಿಯ ಆದೇಶವನ್ನೇ ನೀಡಲು ಸಮ್ಮತಿಸಿದರು. ಮುಂದುವರೆದು, ಕುಲಸಚಿವ(ಪರೀಕ್ಷಾಂಗ) ಇವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಸಮಿತಿಯು ಪದನಾಮ ಬದಲಾವಣೆಯ ಸಂಬಂಧ ವ್ಯತಿರಿಕ್ತವಾಗಿ ವರದಿ ಸಲ್ಲಿಸಿದಲ್ಲಿ ಆನಂತರ ಪರಿಷ್ಕೃತ ಆದೇಶ ಹೊರಡಿಸುವುದರ ಬಗೆಗೆ ಕ್ರಮವಹಿಸಬಹುದಾಗಿದೆ.

| | |
|---|---|
| ತೀರ್ಮಾನ : | ದಿನಾಂಕ: 03-02-2023ರಂದು ಜರುಗಿದ "ಸಿಂಡಿಕೇಟಿನ ಮೊದಲನೇ ಸಾಮಾನ್ಯ ಸಭೆ", ದಿನಾಂಕ: 16-02-2023ರಂದು ನಡೆದ "ಸಿಂಡಿಕೇಟಿನ ವಿಶೇಷ ಸಭೆ" ಮತ್ತು ದಿನಾಂಕ: 06-03-2023ರಂದು ನಡೆದ "ಸಿಂಡಿಕೇಟಿನ ವಿಶೇಷ ಸಭೆ"ಯ ನಡವಳಿಗಳನ್ನು ಹಾಗೂ ತೆಗೆದುಕೊಂಡಿರುವ (ತಿದ್ದುಪಡಿ/ಸೇರ್ಪಡೆ) ಕ್ರಮವನ್ನು ದೃಢೀಕರಿಸಲಾಯಿತು. |
| ಸಾಮಾನ್ಯ ಸಭೆ 2023/2.1 | ದಿವಂಗತ ಶ್ರೀ ಶಿವಪ್ಪ ವೀರೇಶಪ್ಪ ಗವಾರಿ, ಸೇವಕ, ಯುವರಾಜ ಕಾಲೇಜು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರ ಪತ್ನಿಯಾದ ಶ್ರೀಮತಿ ಬಸಮ್ಮ ಕುರಿ ಅವರಿಗೆ ಅನುಕಂಪದ ಆಧಾರದ ಮೇಲೆ ಉದ್ಯೋಗ ನೀಡುವ ಬಗ್ಗೆ. |
| ತೀರ್ಮಾನ | ವಿಶ್ವವಿದ್ಯಾನಿಲಯದ ಸೇವೆಯಲ್ಲಿರುವಾಗಲೇ ನಿಧನರಾದ ನೌಕರರ ಕುಟುಂಬದವರಿಗೆ ಅನುಕಂಪದ ಆಧಾರದ ಮೇಲೆ ಉದ್ಯೋಗ ನೀಡಲು ರಚಿಸಲಾಗಿರುವ ಅಧಿನಿಯಮಗಳ ಅನ್ವಯ ದಿವಂಗತ ಶ್ರೀ ಶಿವಪ್ಪ ವೀರೇಶಪ್ಪ ಗವಾರಿ, ಸೇವಕ, ಯುವರಾಜ ಕಾಲೇಜು, ಮೈಸೂರು ಇವರ ಪತ್ನಿಯಾದ ಶ್ರೀಮತಿ ಬಸಮ್ಮ ಕುರಿ ಇವರಿಗೆ ಅನುಕಂಪದ ಆಧಾರದ ಮೇಲೆ ಪರಿಚಾರಕರ ಹುದ್ದೆಯಲ್ಲಿ ನೇಮಕಾತಿ ಮಾಡಲು ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2023/2.2 | ದಿವಂಗತ ಶ್ರೀ ಮುರುಗೇಶ್, ತೋಟಗಾರರು, ತೋಟಗಾರಿಕಾ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರ ಪತ್ನಿಯಾದ ಶ್ರೀಮತಿ ಸುಗುಣ ಅವರಿಗೆ ಅನುಕಂಪದ ಆಧಾರದ ಮೇಲೆ ಉದ್ಯೋಗ ನೀಡುವ ಬಗ್ಗೆ. |
| ತೀರ್ಮಾನ | ವಿಶ್ವವಿದ್ಯಾನಿಲಯದ ಸೇವೆಯಲ್ಲಿರುವಾಗಲೇ ನಿಧನರಾದ ನೌಕರರ ಕುಟುಂಬದವರಿಗೆ ಅನುಕಂಪದ ಆಧಾರದ ಮೇಲೆ ಉದ್ಯೋಗ ನೀಡಲು ರಚಿಸಲಾಗಿರುವ ಅಧಿನಿಯಮಗಳ ಅನ್ವಯ ದಿವಂಗತ ಶ್ರೀ ಮುರುಗೇಶ್, ತೋಟಗಾರರು, ತೋಟಗಾರಿಕಾ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರ ಪತ್ನಿಯಾದ ಶ್ರೀಮತಿ ಸುಗುಣ ಇವರಿಗೆ ಅನುಕಂಪದ ಆಧಾರದ ಮೇಲೆ ಪರಿಚಾರಕರ ಹುದ್ದೆಯಲ್ಲಿ ನೇಮಕಾತಿ ಮಾಡಲು ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2023/2.3 | ಪ್ರೊ. ಹೆಚ್. ನಾಗರಾಜ್, ಭೂಗೋಳಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರಿಗೆ 6 ತಿಂಗಳು ನಂತರದ ಜೀವನಾಧಾರ ಭತ್ಯೆಯನ್ನು ನೀಡುವ ಬಗ್ಗೆ. |
| | ಪ್ರೊ. ಮುಜಾಫರ್ ಹೆಚ್ ಅಸ್ಸಾದಿ ಅವರು ಮಾತನಾಡಿ, ಇನ್ನು ಮುಂದೆ ವಿಶ್ವವಿದ್ಯಾನಿಲಯದ ಅಧ್ಯಾಪಕರುಗಳ ತನಿಖೆ/ವಿಚಾರಣೆಗೆ ಸಂಬಂಧಿಸಿದಂತೆ ನಿವೃತ್ತ ನ್ಯಾಯಾಧೀಶರು ಅಥವಾ ಪೋಲೀಸ್ ಅವರುಗಳನ್ನೊಳಗೊಂಡಂತೆ ವಿಚಾರಣೆ ನಡೆಸುವ ಬದಲು ವಿಭಾಗ ವಿಚಾರಣೆ ಅಥವಾ ಅಂತರಿಕ ವಿಚಾರಣೆ ಮಾಡುವುದು ಸೂಕ್ತವೆಂದು ಅಭಿಪ್ರಾಯಿಸಿದರು. |
| ತೀರ್ಮಾನ | ತನಿಖೆಯಲ್ಲಿನ ವಿಳಂಬವು ಪ್ರೊ. ಹೆಚ್. ನಾಗರಾಜ್ ಅವರ ಕಡೆಯಿಂದ ಆಗದೇ ಇರುವುದರಿಂದ ಮತ್ತು ಕಾನೂನು ಸಲಹೆಗಾರರ ಅಭಿಪ್ರಾಯದಂತೆ ಕೆ.ಸಿ.ಎಸ್.ಆರ್.ನ ನಿಯಮ 98(1)ರ ಪ್ರಕಾರ ಪ್ರೊ. ಹೆಚ್. ನಾಗರಾಜ್, ಭೂಗೋಳಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರಿಗೆ 6 ತಿಂಗಳು ನಂತರ |

| | |
|---|---|
| | ನಿಯಮಾನುಸಾರ ಶೇ.75 ರಷ್ಟು ಜೀವನಾಧಾರ ಭತ್ಯೆಯನ್ನು ನೀಡಲು ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2023/2.4 | ಶ್ರೀ ರಾಘವೇಂದ್ರ ಕೆ.ಎಸ್., ದ್ವಿತೀಯ ದರ್ಜೆ ಸಹಾಯಕರು, ಆಡಳಿತ ಶಾಖೆ ಇವರ ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯದ ನಿಯೋಜನೆಯನ್ನು ಮುಂದುವರೆಸುವ ಬಗ್ಗೆ. |
| | ಮಾನ್ಯ ಕುಲಪತಿಗಳು ಮಾತನಾಡಿ, ಶ್ರೀ ರಾಘವೇಂದ್ರ.ಕೆ.ಎಸ್ ಇವರು ಮೈಸೂರು ವಿಶ್ವವಿದ್ಯಾನಿಲಯದ ಉದ್ಯೋಗಿಯಾಗಿರುವುದರಿಂದ ಹಾಗೂ ಖಾಯಂ ನೌಕರರ ಸಂಖ್ಯೆಯು ಕಡಿಮೆಯಿರುವುದರಿಂದ, ಇವರ ಸೇವೆಯನ್ನು ನಮ್ಮ ವಿಶ್ವವಿದ್ಯಾನಿಲಯವು ಪಡೆಯುವುದು ಅವಶ್ಯಕವಾಗಿದೆ. ಆದುದರಿಂದ, ಮತ್ತೊಂದು ವರ್ಷದ ಅವಧಿಗೆ ಮಾತ್ರ ನಿಯೋಜಿಸಲು ಅನುಮತಿಸುವುದು. ತದನಂತರ ಇವರ ಸೇವೆಯನ್ನು ವಿಶ್ವವಿದ್ಯಾನಿಲಯವು ಉಪಯೋಗಿಸಿಕೊಳ್ಳುವುದು ಸೂಕ್ತ ಎಂದು ತಿಳಿಸಿದರು. |
| ತೀರ್ಮಾನ | ಶ್ರೀ ರಾಘವೇಂದ್ರ.ಕೆ.ಎಸ್., ದ್ವಿತೀಯ ದರ್ಜೆ ಸಹಾಯಕರು, ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರನ್ನು ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯಕ್ಕೆ ಮತ್ತೊಂದು ವರ್ಷದ ಅವಧಿಗೆ ನಿಯೋಜಿಸಲು ವಿಶ್ವವಿದ್ಯಾನಿಲಯವು ಅನುಮತಿಸಿರುವುದನ್ನು ಸಭೆಯು ಅನುಸಮರ್ಥಿಸಿತು ಹಾಗೂ ತದನಂತರ ಶ್ರೀ ರಾಘವೇಂದ್ರ ಕೆ.ಎಸ್. ಅವರನ್ನು ಮತ್ತೊಂದು ವರ್ಷಕ್ಕೆ ನಿಯೋಜಿಸದೇ ಇವರ ಸೇವೆಯನ್ನು ವಿಶ್ವವಿದ್ಯಾನಿಲಯವು ಉಪಯೋಗಿಸಿಕೊಳ್ಳಲು ಸಭೆಯಲ್ಲಿ ತೀರ್ಮಾನಿಸಲಾಯಿತು. |
| ಸಾಮಾನ್ಯ ಸಭೆ 2023/2.5 | ಡಾ. ಬಿ.ಆರ್. ಅಂಬೇಡ್ಕರ್ ಸಂಶೋಧನ ಹಾಗೂ ವಿಸ್ತರಣ ಕೇಂದ್ರ, ಮೈಸೂರು ವಿಶ್ವವಿದ್ಯಾನಿಲಯ, ಮಾನಸಗಂಗೋತ್ರಿ, ಮೈಸೂರು ಇವರ ಕೇಂದ್ರದ "ವಿಶ್ವಜ್ಞಾನಿ" ಸಭಾಂಗಣಕ್ಕೆ ನಿರ್ವಹಣಾ ಶುಲ್ಕವನ್ನು ನಿಗದಿಪಡಿಸುವ ಬಗ್ಗೆ. |
| ತೀರ್ಮಾನ | ಡಾ. ಬಿ.ಆರ್. ಅಂಬೇಡ್ಕರ್ ಸಂಶೋಧನ ಹಾಗೂ ವಿಸ್ತರಣ ಕೇಂದ್ರ, ಮೈಸೂರು ವಿಶ್ವವಿದ್ಯಾನಿಲಯ, ಮಾನಸಗಂಗೋತ್ರಿ, ಮೈಸೂರು ಇವರು "ವಿಶ್ವಜ್ಞಾನಿ" ಸಭಾಂಗಣಕ್ಕೆ ಮೈಸೂರು ವಿಶ್ವವಿದ್ಯಾನಿಲಯದ ವಿಭಾಗಗಳನ್ನು ಹೊರತುಪಡಿಸಿ, ಹೊರಗಿನ ಯಾವುದೇ ಸಂಘ ಸಂಸ್ಥೆಗಳಿಗೆ ಕಾರ್ಯಕ್ರಮವನ್ನು ಆಯೋಜಿಸಿದರೆ ಒಂದು ದಿನಕ್ಕೆ ನಿರ್ವಹಣ ಶುಲ್ಕ ರೂ.30,000/- + ಜಿ.ಎಸ್.ಟಿ 18% ಮತ್ತು ಭದ್ರತಾ ಠೇವಣಿ ಶುಲ್ಕ ರೂ.30,000/-ಗಳನ್ನು ನಿಗದಿಪಡಿಸುವ ಮುನ್ನ ವಿವಿ ತಾಂತ್ರಿಕ ವಿಭಾಗ ಹಾಗೂ ಎಸ್ಟೇಟ್ ಅಧಿಕಾರಿಯವರ ಕಛೇರಿಯಿಂದ ಅಭಿಪ್ರಾಯ ಪಡೆದು ಶುಲ್ಕ ನಿಗಧಿಗೆ ಕ್ರಮವಹಿಸಲು ತೀರ್ಮಾನಿಸಲಾಯಿತು. |
| ಸಾಮಾನ್ಯ ಸಭೆ 2023/2.6 | "ಶ್ರೀಮತಿ ಸುಜಾತಮಣಿ ಸಿಂದಘಟ್ಟ ನಾಗರಾಜ ಚಿನ್ನದ ಪದಕ" ದತ್ತಿ ಸ್ಥಾಪನೆ ಮಾಡುವ ಬಗ್ಗೆ. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000ರ ಪ್ರಕರಣ 29 (2) (r) ಪ್ರಕಾರ ದತ್ತಿ ಮೊತ್ತವಾದ ರೂ.1,00,000/-ದಲ್ಲಿ ಪ್ರತಿ ವರ್ಷ ಮೂಲಧನಕ್ಕೆ ಕ್ರೋಢಿಕೃತವಾಗುವ ಬಡ್ಡಿಯ ಹಣದಲ್ಲಿ ಶೇ.20 ರಷ್ಟನ್ನು ದತ್ತಿಯ ಮೂಲ ಧನಕ್ಕೆ ಸೇರಿಸಿ, ಉಳಿದ ಶೇ.80 ರಷ್ಟು ಬಡ್ಡಿಯ ಹಣವನ್ನು M.A in Philosophy (ಪ್ರಥಮ ಆದ್ಯತೆ ಅದ್ವೈತ ಸಿದ್ದಾಂತ ಆದಿ ಶಂಕರಾಚಾರ್ಯರ "ಮೋಕ್ಷ ಹೊಂದುವುದೇ ಮಾನವನ ಮೂಲ ಉದ್ದೇಶ") ಪದವಿ ಪರೀಕ್ಷೆಯಲ್ಲಿ ಮೊದಲನೇ ಬಾರಿಗೆ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗೆ "ಶ್ರೀಮತಿ ಸುಜಾತಮಣಿ ಸಿಂದಘಟ್ಟ ನಾಗರಾಜ ಚಿನ್ನದ ಪದಕ" ದತ್ತಿ ಸ್ಥಾಪಿಸಲು ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2023/2.7 | ಸಾರ್ವಜನಿಕ ಆಡಳಿತ ಅಧ್ಯಯನ ವಿಭಾಗಕ್ಕೆ ಪ್ರಭಾರ ಅಧ್ಯಕ್ಷರನ್ನು ನೇಮಕ ಮಾಡಿರುವ ಬಗ್ಗೆ. |

| | |
|---|---|
| ತೀರ್ಮಾನ | ಪ್ರೊ. ಮುಜ಼ಾಫರ್ ಹೆಚ್ ಅಸ್ಸಾದಿ, ಡೀನರು, ಕಲಾ ನಿಕಾಯ ಮತ್ತು ಪ್ರಾಧ್ಯಾಪಕರು, ರಾಜ್ಯಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ: 02-07-2021 ರಿಂದ ಜಾರಿಗೆ ಬಂದಂತೆ ಸಾರ್ವಜನಿಕ ಆಡಳಿತ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿತ್ತು. ಪ್ರಸ್ತುತ ಇವರು ಮೈಸೂರು ವಿಶ್ವವಿದ್ಯಾನಿಲಯದ ಪ್ರಭಾರ ಕುಲಪತಿಗಳಾಗಿ ನೇಮಕಗೊಂಡಿದ್ದರಿಂದ, ಸಾರ್ವಜನಿಕ ಆಡಳಿತ ಅಧ್ಯಯನ ವಿಭಾಗದ ದೈನಂದಿನ ಕೆಲಸಕಾರ್ಯಗಳು ಸುಲಲಿತವಾಗಿ ಜರುಗಬೇಕೆನ್ನುವ ದೃಷ್ಟಿಯಿಂದ ಪ್ರೊ. ಕೃಷ್ಣ ಹೊಂಬಾಳ್, ಪ್ರಾಧ್ಯಾಪಕರು, ರಾಜ್ಯಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ಸಾರ್ವಜನಿಕ ಆಡಳಿತ ಅಧ್ಯಯನ ವಿಭಾಗದ ಪ್ರಭಾರ ಅಧ್ಯಕ್ಷರನ್ನಾಗಿ ನೇಮಕ ಮಾಡಿ ದಿನಾಂಕ: 04-03-2023 ರಂದು ಆದೇಶ ಹೊರಡಿಸಲಾಗಿತ್ತು.<br><br>ಕರ್ನಾಟಕ ರಾಜ್ಯ ಸರ್ಕಾರವು ದಿನಾಂಕ: 23-03-2023ರಂದು ಪ್ರೊ. ಎನ್.ಕೆ. ಲೋಕನಾಥ್, ಪ್ರಾಧ್ಯಾಪಕರು, ಭೌತಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಹಾಗೂ ನಿರ್ದೇಶಕರು, ಯೋಜನೆ, ಉಸ್ತುವಾರಿ ಮತ್ತು ಮೌಲ್ಯಮಾಪನ ಮಂಡಳಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರನ್ನು ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿಯಾಗಿ ನೇಮಕ ಮಾಡಿರುವುದರಿಂದ, ಪ್ರೊ. ಮುಜ಼ಾಫರ್ ಹೆಚ್ ಅಸ್ಸಾದಿ, ಡೀನರು, ಕಲಾ ನಿಕಾಯ ಮತ್ತು ಪ್ರಾಧ್ಯಾಪಕರು, ರಾಜ್ಯಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ಮತ್ತೊಮ್ಮೆ ಮುಂದಿನ ಆದೇಶದವರೆಗೆ ಅಥವಾ ನಿವೃತ್ತಿಯ ದಿನಾಂಕದವರೆಗೆ ಈ ತಕ್ಷಣದಿಂದ ಜಾರಿಗೆ ಬಂದಂತೆ ಸಾರ್ವಜನಿಕ ಆಡಳಿತ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸಭೆಯು ತೀರ್ಮಾನಿಸಿತು. |
| ಸಾಮಾನ್ಯ ಸಭೆ 2023/2.8 | ಇಂಗ್ಲಿಷ್ ಅಧ್ಯಯನ ವಿಭಾಗಕ್ಕೆ ಪ್ರಭಾರ ಅಧ್ಯಕ್ಷರನ್ನು ನೇಮಕ ಮಾಡಿರುವ ಬಗ್ಗೆ. |
| | ಪ್ರೊ. ಮುಜ಼ಾಫರ್ ಹೆಚ್ ಅಸ್ಸಾದಿ, ಡೀನರು, ಕಲಾ ನಿಕಾಯ ಮತ್ತು ಪ್ರಾಧ್ಯಾಪಕರು, ರಾಜ್ಯಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ: 10-11-2022 ರಿಂದ ಜಾರಿಗೆ ಬಂದಂತೆ ಇಂಗ್ಲೀಷ್ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನಾಗಿ ನಾಮನಿರ್ದೇಶನ ಮಾಡಲಾಗಿತ್ತು. |
| ತೀರ್ಮಾನ | ಇಂಗ್ಲಿಷ್ ಅಧ್ಯಯನ ವಿಭಾಗದ ದೈನಂದಿನ ಕೆಲಸಕಾರ್ಯಗಳು ಸುಲಲಿತವಾಗಿ ಜರುಗಬೇಕೆನ್ನುವ ದೃಷ್ಟಿಯಿಂದ ಪ್ರೊ. ಕೃಷ್ಣಕುಮಾರಿ ಮನವಳ್ಳಿ, ಪ್ರಾಧ್ಯಾಪಕರು, ಇಂಗ್ಲೀಷ್ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ಕಲಾ ನಿಕಾಯದ ಡೀನರು ಪ್ರಭಾರ ಕುಲಪತಿಗಳಾಗಿ ಅಧಿಕಾರ ವಹಿಸಿಕೊಂಡಿದ್ದರಿಂದ ಇವರ ಬದಲಿಗೆ ತಾತ್ಕಾಲಿಕವಾಗಿ ದಿನಾಂಕ: 28.02.2023ರಿಂದ ಜಾರಿಗೆ ಬಂದಂತೆ ಇಂಗ್ಲಿಷ್ ಅಧ್ಯಯನ ವಿಭಾಗದ ಪ್ರಭಾರ ಅಧ್ಯಕ್ಷರನ್ನಾಗಿ ಮುಂದಿನ ಆದೇಶದವರೆಗೆ ನೇಮಿಸಿ ಆದೇಶ ಹೊರಡಿಸಲಾಗಿತ್ತು.<br><br>ಕರ್ನಾಟಕ ರಾಜ್ಯ ಸರ್ಕಾರವು ದಿನಾಂಕ: 23-03-2023ರಂದು ಪ್ರೊ. ಎನ್.ಕೆ. ಲೋಕನಾಥ್, ಪ್ರಾಧ್ಯಾಪಕರು, ಭೌತಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಹಾಗೂ ನಿರ್ದೇಶಕರು, ಯೋಜನೆ, ಉಸ್ತುವಾರಿ ಮತ್ತು ಮೌಲ್ಯಮಾಪನ ಮಂಡಳಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರನ್ನು ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿಯಾಗಿ ನೇಮಕ ಮಾಡಿರುವುದರಿಂದ, ಪ್ರೊ. ಮುಜ಼ಾಫರ್ ಹೆಚ್ ಅಸ್ಸಾದಿ, ಡೀನರು, ಕಲಾ ನಿಕಾಯ ಮತ್ತು ಪ್ರಾಧ್ಯಾಪಕರು, ರಾಜ್ಯಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ಮತ್ತೊಮ್ಮೆ ಮುಂದಿನ ಆದೇಶದವರೆಗೆ ಅಥವಾ ನಿವೃತ್ತಿಯ ದಿನಾಂಕದವರೆಗೆ ಈ ತಕ್ಷಣದಿಂದ |

| | |
|---|---|
| | ಜಾರಿಗೆ ಬಂದಂತೆ ಇಂಗ್ಲೀಷ್ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನಾಗಿ ನೇಮಕ ಮಾಡಲು ತೀರ್ಮಾನಿಸಿತು. |
| ಸಾಮಾನ್ಯ ಸಭೆ 2023/2.9 | ರೇಷ್ಮೆಕೃಷಿ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನು ನೇಮಕ ಮಾಡುವ ಬಗ್ಗೆ. |
| | ಪ್ರೊ. ಹೆಚ್.ಬಿ. ಮಂಜುನಾಥ, ಪ್ರಾಧ್ಯಾಪಕರು ಇವರನ್ನು ದಿನಾಂಕ: 07-06-2021 ರಿಂದ ಜಾರಿಗೆ ಬಂದಂತೆ ರೇಷ್ಮೆಕೃಷಿ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇಲ್ಲಿಗೆ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದ್ದು, ಇವರ ಅವಧಿಯು ದಿನಾಂಕ: 06-06-2023ಕ್ಕೆ ಮುಕ್ತಾಯಗೊಳ್ಳುತ್ತಿದೆ ಹಾಗೂ ರೇಷ್ಮೆಕೃಷಿ ಅಧ್ಯಯನ ವಿಭಾಗದ ಪ್ರಾಧ್ಯಾಪಕರುಗಳ ಜೇಷ್ಠತೆಗನುಸಾರವಾಗಿ ಸರದಿಯ ಮೇಲೆ ಪ್ರೊ. ಟಿ.ಎಸ್. ಜಗದೀಶ್‌ಕುಮಾರ್, ಪ್ರಾಧ್ಯಾಪಕರು ಇವರು ಹಿರಿಯರಾಗಿರುತ್ತಾರೆ ಎಂಬುದನ್ನು ಸಿಂಡಿಕೇಟ್ ಗಮನಿಸಿತು. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಪ್ರಕರಣ 34(7)ರ ಪ್ರಕಾರ ಪ್ರೊ. ಟಿ.ಎಸ್.ಜಗದೀಶ್‌ಕುಮಾರ್, ಪ್ರಾಧ್ಯಾಪಕರು, ರೇಷ್ಮೆಕೃಷಿ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ: 07-06-2023 ರಿಂದ ಜಾರಿಗೆ ಬಂದಂತೆ ಎರಡು ವರ್ಷಗಳ ಅವಧಿಗೆ ಅಥವಾ ನಿವೃತ್ತಿಯ ದಿನಾಂಕದವರೆಗೆ ಅಥವಾ ಮುಂದಿನ ಆದೇಶದವರೆಗೆ, ಇವುಗಳಲ್ಲಿ ಯಾವುದು ಮೊದಲು ಘಟಿಸುವುದೋ ಅಲ್ಲಿಯವರೆಗೆ ರೇಷ್ಮೆಕೃಷಿ ಅಧ್ಯಯನ ವಿಭಾಗದ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸಭೆಯಲ್ಲಿ ತೀರ್ಮಾನಿಸಲಾಯಿತು. |
| ಸಾಮಾನ್ಯ ಸಭೆ 2023/2.10 | ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನು ನೇಮಕ ಮಾಡುವ ಬಗ್ಗೆ. |
| | ಪ್ರೊ. ಎಸ್. ಮದಿಅಳಗನ್, ಪ್ರಾಧ್ಯಾಪಕರು ಇವರನ್ನು ದಿನಾಂಕ: 02-07-2021 ರಿಂದ ಜಾರಿಗೆ ಬಂದಂತೆ ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದ್ದು, ಇವರ ಅವಧಿಯು ದಿನಾಂಕ: 01-07-2023ಕ್ಕೆ ಮುಕ್ತಾಯಗೊಳ್ಳುತ್ತಿದೆ. ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ಅಧ್ಯಯನ ವಿಭಾಗದ ಪ್ರಾಧ್ಯಾಪಕರುಗಳ ಜೇಷ್ಠತೆಗನುಸಾರವಾಗಿ ಸರದಿಯ ಮೇಲೆ ಪ್ರೊ. ಸಿ.ವೆಂಕಟೇಶ್, ಪ್ರಾಧ್ಯಾಪಕರು ಇವರು ಹಿರಿಯರಾಗಿರುತ್ತಾರೆ ಎಂಬುದನ್ನು ಸಿಂಡಿಕೇಟ್ ಗಮನಿಸಿತು. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಪ್ರಕರಣ 34(7)ರ ಪ್ರಕಾರ ಪ್ರೊ.ಸಿ.ವೆಂಕಟೇಶ್, ಪ್ರಾಧ್ಯಾಪಕರು, ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ಅಧ್ಯಯನ ವಿಭಾಗ, ಮೈಸೂರು ಇವರನ್ನು ದಿನಾಂಕ: 02-07-2023 ರಿಂದ ಜಾರಿಗೆ ಬಂದಂತೆ ಎರಡು ವರ್ಷಗಳ ಅವಧಿಗೆ ಅಥವಾ ನಿವೃತ್ತಿಯ ದಿನಾಂಕದವರೆಗೆ ಅಥವಾ ಮುಂದಿನ ಆದೇಶದವರೆಗೆ, ಇವುಗಳಲ್ಲಿ ಯಾವುದು ಮೊದಲು ಘಟಿಸುವುದೋ ಅಲ್ಲಿಯವರೆಗೆ ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ಅಧ್ಯಯನ ವಿಭಾಗದ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸಭೆಯಲ್ಲಿ ತೀರ್ಮಾನಿಸಲಾಯಿತು. |
| ಸಾಮಾನ್ಯ ಸಭೆ 2023/2.11 | ಇತಿಹಾಸ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನು ನೇಮಕ ಮಾಡುವ ಬಗ್ಗೆ. |
| | ಪ್ರೊ. ಕೆ. ಸದಾಶಿವ, ಪ್ರಾಧ್ಯಾಪಕರು ಇವರನ್ನು ದಿನಾಂಕ: 02-07-2021 ರಿಂದ ಜಾರಿಗೆ ಬಂದಂತೆ ಇತಿಹಾಸ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದ್ದು, ಇವರ ಅವಧಿಯು ದಿನಾಂಕ: 01-07-2023ಕ್ಕೆ ಮುಕ್ತಾಯಗೊಳ್ಳುತ್ತಿದೆ. ಇತಿಹಾಸ ಅಧ್ಯಯನ ವಿಭಾಗದ ಪ್ರಾಧ್ಯಾಪಕರುಗಳ ಜೇಷ್ಠತೆಗನುಸಾರವಾಗಿ ಸರದಿಯ ಮೇಲೆ |

| | |
|---|---|
| | ಪ್ರೊ. ವೈ.ಹೆಚ್. ನಾಯಕವಾಡಿ, ಪ್ರಾಧ್ಯಾಪಕರು ಇವರು ಹಿರಿಯರಾಗಿರುತ್ತಾರೆ ಎಂಬುದನ್ನು ಸಿಂಡಿಕೇಟ್ ಗಮನಿಸಿತು. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಪ್ರಕರಣ 34(7)ರ ಪ್ರಕಾರ ಪ್ರೊ. ವೈ.ಹೆಚ್.ನಾಯಕವಾಡಿ, ಪ್ರಾಧ್ಯಾಪಕರು, ಇತಿಹಾಸ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ: 02-07-2023 ರಿಂದ ಜಾರಿಗೆ ಬಂದಂತೆ ಎರಡು ವರ್ಷಗಳ ಅವಧಿಗೆ ಅಥವಾ ನಿವೃತ್ತಿಯ ದಿನಾಂಕದವರೆಗೆ ಅಥವಾ ಮುಂದಿನ ಆದೇಶದವರೆಗೆ, ಇವುಗಳಲ್ಲಿ ಯಾವುದು ಮೊದಲು ಘಟಿಸುವುದೋ ಅಲ್ಲಿಯವರೆಗೆ ಇತಿಹಾಸ ಅಧ್ಯಯನ ವಿಭಾಗದ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸಭೆಯಲ್ಲಿ ತೀರ್ಮಾನಿಸಲಾಯಿತು. |
| ಸಾಮಾನ್ಯ ಸಭೆ 2023/2.12 | ಜೈನಶಾಸ್ತ್ರ ಮತ್ತು ಪ್ರಾಕೃತ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನು ನೇಮಕ ಮಾಡುವ ಬಗ್ಗೆ. |
| | ಜೈನಶಾಸ್ತ್ರ ಮತ್ತು ಪ್ರಾಕೃತ ಅಧ್ಯಯನ ವಿಭಾಗದಲ್ಲಿ ಖಾಯಂ ಪ್ರಾಧ್ಯಾಪಕರು/ಸಹ ಪ್ರಾಧ್ಯಾಪಕರು ಇಲ್ಲದೆ ಇರುವುದರಿಂದ ವಿಭಾಗದ ದೈನಂದಿನ ಕೆಲಸಕಾರ್ಯಗಳು ಸುಲಲಿತವಾಗಿ ನಡೆಸಲು ಪ್ರೊ. ವಿಜಯಕುಮಾರಿ ಎಸ್ ಕರಿಕಲ್, ಪ್ರಾಧ್ಯಾಪಕರು, ಕುವೆಂಪು ಕನ್ನಡ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ: 01-06-2021 ರಿಂದ ಜಾರಿಗೆ ಬಂದಂತೆ ಜೈನಶಾಸ್ತ್ರ ಮತ್ತು ಪ್ರಾಕೃತ ಅಧ್ಯಯನ ವಿಭಾಗದ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದ್ದು, ಇವರ ಅವಧಿಯು ದಿನಾಂಕ: 31-05-2023ಕ್ಕೆ ಮುಕ್ತಾಯಗೊಳ್ಳುತ್ತಿದೆ. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಪ್ರಕರಣ 34(7)ರ ಪ್ರಕಾರ ಜೈನಶಾಸ್ತ್ರ ಮತ್ತು ಪ್ರಾಕೃತ ಅಧ್ಯಯನ ವಿಭಾಗದ ದೈನಂದಿನ ಕೆಲಸಕಾರ್ಯಗಳು ಸುಲಲಿತವಾಗಿ ನಡೆಯಲು ಪ್ರೊ. ವಿಜಯಕುಮಾರಿ ಎಸ್ ಕರಿಕಲ್, ಪ್ರಾಧ್ಯಾಪಕರು ಹಾಗೂ ನಿರ್ದೇಶಕರು, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ: 01-06-2023 ರಿಂದ ಜಾರಿಗೆ ಬಂದಂತೆ ಅಥವಾ ಮುಂದಿನ ಆದೇಶದವರೆಗೆ ಜೈನಶಾಸ್ತ್ರ ಮತ್ತು ಪ್ರಾಕೃತ ಅಧ್ಯಯನ ವಿಭಾಗದ ಪ್ರಭಾರ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸಭೆಯಲ್ಲಿ ತೀರ್ಮಾನಿಸಲಾಯಿತು. |
| ಸಾಮಾನ್ಯ ಸಭೆ 2023/2.13 | ಮೈಸೂರು ವಿಶ್ವವಿದ್ಯಾನಿಲಯದ ಕರಡು ಪಿಂಚಣಿ ಅಧಿನಿಯಮ-1979ಕ್ಕೆ ತಿದ್ದುಪಡಿ ಮಾಡುವ ಬಗ್ಗೆ. |
| ತೀರ್ಮಾನ | ಸರ್ಕಾರವು ತಿಳಿಸಿರುವಂತೆ ತಿದ್ದುಪಡಿ ಮಾಡಲಾಗಿರುವ **'ಮೈಸೂರು ವಿಶ್ವವಿದ್ಯಾನಿಲಯದ ಕರಡು ಪಿಂಚಣಿ ಅಧಿನಿಯಮ-1979'**ಕ್ಕೆ ಘನತೆವೆತ್ತ ಕುಲಾಧಿಪತಿಗಳಿಂದ ಅಂಕಿತ ದೊರಕಿಸಿಕೊಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಸಭೆಯು ಅಂಗೀಕರಿಸಿತು. |
| ಸಾಮಾನ್ಯ ಸಭೆ 2023/2.14 | ಶ್ರೀಮತಿ ಮೊನಾಲಿಪ ದಾಶ್, ಸಹ ಪ್ರಾಧ್ಯಾಪಕರು, ಇವರು ವಿಶ್ವವಿದ್ಯಾನಿಲಯದ ಸಕ್ಷಮ ಪ್ರಾಧಿಕಾರದ ಅನುಮತಿ ಪಡೆಯದೆ ಉನ್ನತ ವ್ಯಾಸಂಗಕ್ಕಾಗಿ ವಿದೇಶಕ್ಕೆ 03 ವರ್ಷ 6 ತಿಂಗಳು ಹೋಗಿ ಬಂದಿರುವ ಬಗ್ಗೆ. |
| ತೀರ್ಮಾನ | ಶ್ರೀಮತಿ ಮೊನಾಲಿಪ ದಾಶ್ ಅವರು ವಿಶ್ವವಿದ್ಯಾನಿಲಯದಿಂದ ಪೂರ್ವಾನುಮತಿ ಪಡೆಯದೇ ಉನ್ನತ ವ್ಯಾಸಂಗಕ್ಕಾಗಿ ವಿದೇಶಕ್ಕೆ ತೆರಳಿರುವುದನ್ನು ಗಮನಿಸಿದ ಸಭೆಯು ಈ ಕೆಳಕಂಡಂತೆ ತೀರ್ಮಾನಿಸಿತು.<br>1) ಆರ್ಥಿಕ ಇಲಾಖೆಯ ಅಧಿಕೃತ ಜ್ಞಾಪನ ಪತ್ರದನ್ವಯ ಶ್ರೀಮತಿ ಮೊನಾಲಿಪ ದಾಶ್, ಇವರು ಪೂರ್ವಾನುಮತಿ ಪಡೆಯದೆ ವಿದೇಶಕ್ಕೆ ಉನ್ನತ ವ್ಯಾಸಂಗಕ್ಕಾಗಿ ತೆರಳಿದ್ದ 03 ವರ್ಷ 06 ತಿಂಗಳ ಅವಧಿಯನ್ನು Dies-Non duty ಎಂದು ಪರಿಗಣಿಸಿ ಈ ಅವಧಿಯಲ್ಲಿ ವಾರ್ಷಿಕ ವೇತನ ಬಡ್ತಿ ನಿವೃತ್ತಿ ವೇತನ ಸೌಲಭ್ಯ, ರಜೆ ಸೌಲಭ್ಯ ಮತ್ತು |

| | |
|---|---|
| | ಇನ್ನಿತರೆ ಯಾವುದೇ ಆರ್ಥಿಕ ಸೌಲಭ್ಯಗಳಿಗೆ ಅರ್ಹದಾಯಕ ಸೇವೆಯೆಂದು ಪರಿಗಣಿಸದಿರುವಂತೆ ಹಾಗೂ ಸದರಿಯವರಿಂದ ಈ ಬಗ್ಗೆ ಸೂಕ್ತ ಮುಚ್ಚಳಿಕೆ ಪಡೆಯುವುದು.<br>2) ಉನ್ನತ ವ್ಯಾಸಂಗದ ಅವಧಿಯಲ್ಲಿನ ಪೋಸ್ಟ್ ಡಾಕ್ಟರಲ್ ಫೆಲೋ (ಪಿಹೆಚ್.ಡಿ) ವ್ಯಾಸಂಗ ಮಾಡಿರುವುದಕ್ಕೆ ಪ್ರಗತಿ ವರದಿ ಹಾಗೂ ಪೂರಕ ದಾಖಲೆಗಳನ್ನು ಯುಕ್ತ ಮಾರ್ಗದಲ್ಲಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವುದು.<br>3) 2023ನೇ ಸಾಲಿನ ಎರಡನೇ ಸಾಮಾನ್ಯ ಸಿಂಡಿಕೇಟ್ ಸಭೆ ಜರುಗಿದ ನಂತರ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವ ದಿನಾಂಕದಿಂದ ಪರಿಗಣಿಸುವುದು. |
| ಸಾಮಾನ್ಯ ಸಭೆ 2023/2.15 | ಡಾ. ಆಯಿಷಾ ಎಂ. ಷರೀಫ್, ಪ್ರಾಧ್ಯಾಪಕರು, ವ್ಯವಹಾರ ಆಡಳಿತ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರಿಗೆ ಸೆಬಾಟಿಕಲ್ ರಜೆಯನ್ನು ಮಂಜೂರು ಮಾಡುವ ಬಗ್ಗೆ. |
| ತೀರ್ಮಾನ | ದಿನಾಂಕ: 06-03-2023ರಂದು ನಡೆದ ತಜ್ಞರ ಸಮಿತಿ ಸಭೆಯ ಶಿಫಾರಸ್ಸಿನನ್ವಯ, ಡಾ. ಆಯಿಷಾ ಎಂ. ಷರೀಫ್, ಪ್ರಾಧ್ಯಾಪಕರು, ವ್ಯವಹಾರ ಆಡಳಿತ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರಿಗೆ ದಿನಾಂಕ: 15-03-2023 ರಿಂದ ಜಾರಿಗೆ ಬಂದಂತೆ ಒಂದು ವರ್ಷದ ಅವಧಿಗೆ ಸೆಬಾಟಿಕಲ್ ರಜೆಯನ್ನು ಮಂಜೂರು ಮಾಡಿ ಆದೇಶ ಹೊರಡಿಸಿರುವುದನ್ನು ಸಭೆಯು ಅನುಸಮರ್ಥಿಸಿತು. |
| ಸಾಮಾನ್ಯ ಸಭೆ 2023/2.16 | ಡಾ. ಆರ್. ಶಿವಪ್ಪ, ಪ್ರಾಧ್ಯಾಪಕರು, ಸಮಾಜಕಾರ್ಯ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರಿಗೆ ಸೆಬಾಟಿಕಲ್ ರಜೆಯನ್ನು ಮಂಜೂರು ಮಾಡುವ ಬಗ್ಗೆ. |
| ತೀರ್ಮಾನ | ದಿನಾಂಕ: 17-02-2023ರಂದು ನಡೆದ ತಜ್ಞರ ಸಮಿತಿ ಸಭೆಯ ಶಿಫಾರಸ್ಸಿನನ್ವಯ, ಡಾ. ಆರ್. ಶಿವಪ್ಪ, ಪ್ರಾಧ್ಯಾಪಕರು, ಸಮಾಜಕಾರ್ಯ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರಿಗೆ ದಿನಾಂಕ: 01-03-2023 ರಿಂದ ಜಾರಿಗೆ ಬಂದಂತೆ ಒಂದು ವರ್ಷದ ಅವಧಿಗೆ ಸೆಬಾಟಿಕಲ್ ರಜೆಯನ್ನು ಮಂಜೂರು ಮಾಡಿ ಆದೇಶ ಹೊರಡಿಸಿರುವುದನ್ನು ಸಭೆಯು ಅನುಸಮರ್ಥಿಸಿತು. |
| ಸಾಮಾನ್ಯ ಸಭೆ 2023/2.17 | 2023-2024ನೇ ಆರ್ಥಿಕ ಸಾಲಿನ ಮೈಸೂರು ವಿಶ್ವವಿದ್ಯಾನಿಲಯದ ಆಯವ್ಯಯ ಅಂದಾಜುಗಳ "ಕರಡು" ಪಟ್ಟಿ (ಅನುಬಂಧ-1)ಯನ್ನು "ಸಿಂಡಿಕೇಟ್" ಸಭೆಯ ಅನುಮೋದನೆಗಾಗಿ. |
| | ಮಾನ್ಯ ಹಣಕಾಸು ಅಧಿಕಾರಿಗಳು 2023-2024ನೇ ಆರ್ಥಿಕ ಸಾಲಿನ ಮೈಸೂರು ವಿಶ್ವವಿದ್ಯಾನಿಲಯದ ಆಯವ್ಯಯ ಅಂದಾಜುಗಳ "ಕರಡು" ಪಟ್ಟಿ (ಅನುಬಂಧ-1) ಯನ್ನು ಈ ಕೆಳಕಂಡಂತೆ ಸಂಕ್ಷಿಪ್ತವಾಗಿ ಸಭೆಯಲ್ಲಿ ಮಂಡಿಸಿದರು.<br>2023-24ನೇ ಸಾಲಿನ ವಿಶ್ವವಿದ್ಯಾನಿಲಯದ ಆಯವ್ಯಯದ ಅಂದಾಜುಗಳಲ್ಲಿ ಒಟ್ಟಾರೆ ನಿರೀಕ್ಷಿತ ಆದಾಯ ರೂ.347.16 ಕೋಟಿ ಮತ್ತು ಒಟ್ಟಾರೆ ನಿರೀಕ್ಷಿತ ವೆಚ್ಚ ರೂ.432.56 ಕೋಟಿಗಳಾಗಿದ್ದು, ಒಟ್ಟಾರೆಯಾಗಿ ರೂ.85.40 ಕೋಟಿಗಳ ಕೊರತೆಯಿರುತ್ತದೆ.<br>2023-24ನೇ ಸಾಲಿಗೆ ಮೈಸೂರು ವಿಶ್ವವಿದ್ಯಾನಿಲಯದ ಖಾಯಂ ಉದ್ಯೋಗಿಗಳ ವೇತನ ಭತ್ಯೆಗಳಾಗಿ ಸರ್ಕಾರವು ರೂ. 121,08,00,000/-ಗಳನ್ನು ನಿಗದಿಪಡಿಸಲಾಗಿದ್ದು, ಸರ್ಕಾರವೇ HRMS ಪೋರ್ಟಲ್ ಮುಖಾಂತರ ವೇತನಗಳನ್ನು ಪಾವತಿಸುತ್ತಿದೆ. 2022-23ನೇ ಸಾಲಿನಲ್ಲಿ 1761 ಪಿಂಚಣಿದಾರರಿಗೆ ರೂ.50.00 ಕೋಟಿಗಳನ್ನು ಸರ್ಕಾರವು ಬಿಡುಗಡೆ ಮಾಡಿದ್ದು, ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಪ್ರಸ್ತುತ ಸುಮಾರು 1841 ಪಿಂಚಣಿ/ಕುಟುಂಬ ಪಿಂಚಣಿದಾರರಿದ್ದು, ಪಿಂಚಣಿ ಸೌಲಭ್ಯಗಳನ್ನು ಪಡೆಯುತ್ತಿದ್ದಾರೆ. 2022-23ರಲ್ಲಿ 1780 ಪಿಂಚಣಿದಾರರಿದ್ದು, 2023-24ರಲ್ಲಿ ಪಿಂಚಣಿದಾರರ ಸಂಖ್ಯೆ 1841 ಆಗಲಿದ್ದು, ಪ್ರಸುತ ಸಾಲಿನಲ್ಲಿ 61 ಉದ್ಯೋಗಿಗಳು (21 ಬೋಧಕರು ಮತ್ತು 40 ಬೋಧಕೇತರರು) ನಿವೃತ್ತರಾಗುತ್ತಿದ್ದಾರೆ. |

| | |
|---|---|
| | ಆದಕಾರಣ, 2023-24ನೇ ಸಾಲಿಗೆ ಪಿಂಚಣಿ ಬಾಬ್ತಿಗಾಗಿ ವೆಚ್ಚ ರೂ.127,62,33,339/- ಗಳನ್ನು ನಿಗದಿಪಡಿಸಲಾಗಿದೆ, ಆದರೆ ಈಗಲೂ ಸಹ ರಾಜ್ಯ ಸರ್ಕಾರದಿಂದ ರೂ.50.00 ಕೋಟಿಗಳು ಮಾತ್ರವೇ ಬಿಡುಗಡೆಯಾಗಿರುತ್ತದೆ. ಇನ್ನುಳಿದ ಮೊಬಲಗನ್ನು ರೂ.77,62,33,339/- ವಿಶ್ವವಿದ್ಯಾನಿಲಯದ ಆಂತರಿಕ ಆದಾಯದಲ್ಲಿ ಭರಿಸಬೇಕಾಗಿರುತ್ತದೆ.<br><br>2022-23ನೇ ಮತ್ತು 2023-24ನೇ ಸಾಲಿನಲ್ಲಿ ಸರ್ಕಾರದಿಂದ ಪಿಂಚಣಿ ಅನುದಾನವಾಗಿ ಕ್ರಮವಾಗಿ ರೂ.56.00 ಕೋಟಿ ಮತ್ತು ರೂ.77.62 ಕೋಟಿಗಳು ಕಡಿಮೆ ನೀಡಿದ ಕಾರಣದಿಂದಾಗಿ, 2023-24ನೇ ಸಾಲಿಗೆ ಕೊರತೆ ಆಯವ್ಯಯವನ್ನು ಮೈಸೂರು ವಿಶ್ವವಿದ್ಯಾನಿಲಯವು ಎದುರಿಸುತ್ತದೆ ಆದರೂ 2023-24ನೇ ಸಾಲಿನ ವೆಚ್ಚಗಳಲ್ಲಿ ಮಿತವ್ಯಯ ಸ್ಥಾಪಿಸಲು ಕ್ರಮವಹಿಸಲು ಕೋರಲಾಗುವುದು ಮತ್ತು ಅಗತ್ಯ ವೆಚ್ಚಗಳನ್ನು ಹೊರತುಪಡಿಸಿ ಉಳಿದ ವೆಚ್ಚಗಳಿಗೆ ಕಡಿವಾಣ ಹಾಕಲಾಗುವುದೆಂದು ತಿಳಿಸಿದರು. ಮುಂದುವರೆದು, ಪಿಂಚಣಿ ಅನುದಾನವನ್ನು ಹೆಚ್ಚುವರಿಯಾಗಿ ನೀಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾಪನೆ ಸಲ್ಲಿಸಲು ಸೂಕ್ತ ಕ್ರಮ ವಹಿಸಲಾಗುವುದೆಂದು ತಿಳಿಸಿದರು. 2023-24ನೇ ಸಾಲಿನ ವಿಶ್ವವಿದ್ಯಾನಿಲಯದ ಆಯವ್ಯಯದ ಅಂದಾಜುಗಳಲ್ಲಿ ಒಟ್ಟಾರೆ ನಿರೀಕ್ಷಿತ ಆದಾಯ ರೂ.347.16 ಕೋಟಿ ಮತ್ತು ಒಟ್ಟಾರೆ ನಿರೀಕ್ಷಿತ ವೆಚ್ಚ ರೂ.432.56 ಕೋಟಿಗಳಾಗಿದ್ದು, ಒಟ್ಟಾರೆಯಾಗಿ ರೂ.85.40 ಕೋಟಿಗಳ ಕೊರತೆ ಆಯವ್ಯಯ ಅಂದಾಜನ್ನು ಮಂಡಿಸಲಾಗಿದೆ.<br><br>ಈ ಸಂಬಂಧ ಪ್ರೊ. ಮುಜಾಫರ್ ಹೆಚ್. ಅಸ್ಸಾದಿ, ಡೀನರು, ಕಲಾ ನಿಕಾಯ ಹಾಗೂ ಪ್ರಾಧ್ಯಾಪಕರು, ರಾಜಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ರವರು ಮಾತನಾಡಿ, ಪಿಂಚಣಿ ಹಣ ಸರ್ಕಾರದಿಂದ ಸಮರ್ಪಕವಾಗಿ ಬರುತ್ತಿಲ್ಲ ಹಾಗೂ ಪಿಂಚಣಿದಾರರ ಸಂಖ್ಯೆ ಹೆಚ್ಚಾಗುತ್ತಿದ್ದು, ವಿಶ್ವವಿದ್ಯಾನಿಲಯದ ಆಂತರಿಕ ಸಂಪನ್ಮೂಲ ಕಡಿಮೆಯಾಗುತ್ತಿದ್ದು, ಜಿಲ್ಲೆಗೊಂದರಂತೆ ವಿಶ್ವವಿದ್ಯಾನಿಲಯ ಸ್ಥಾಪನೆಗೊಂಡಿರುವುದರಿಂದ, ಮುಂದಿನ ದಿನಗಳಲ್ಲಿ ಅಧಾಪಕೇತರರಿಗೆ ಹಾಗೂ ಅತಿಥಿ ಉಪನ್ಯಾಸಕರಿಗೆ ವೇತನ ನೀಡಲು ಕಷ್ಟವಾಗುವುದರಿಂದ ಮಾನ್ಯ ಕುಲಪತಿಗಳು ಮೈಸೂರು ವಿಶ್ವವಿದ್ಯಾನಿಲಯವನ್ನು ಕೇಂದ್ರೀಯ ವಿಶ್ವವಿದ್ಯಾನಿಲಯವನ್ನಾಗಿ ಪರಿವರ್ತಿಸಲು ಸೂಕ್ತ ಕ್ರಮ ತೆಗೆದುಕೊಳ್ಳಬೇಕೆಂದು ಕೋರಿದರು. |
| ತೀರ್ಮಾನ | 2023-2024ನೇ ಆರ್ಥಿಕ ಸಾಲಿನ ಮೈಸೂರು ವಿಶ್ವವಿದ್ಯಾನಿಲಯದ ಆಯವ್ಯಯ ಅಂದಾಜುಗಳ "ಕರಡು" ಪಟ್ಟಿ (ಅನುಬಂಧ-1)ಯನ್ನು "ಸಿಂಡಿಕೇಟ್" ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2023/2.18 | 2022-2023ನೇ ಸಾಲಿನ ಆಯವ್ಯಯವನ್ನು ಪರಿಷ್ಕರಿಸುವ ಕುರಿತು. |
| ತೀರ್ಮಾನ | ಮೈಸೂರು ವಿಶ್ವವಿದ್ಯಾನಿಲಯದ ವಿಭಾಗ/ಕಛೇರಿಗಳು ಕೋರಿರುವಂತೆ ಅಗತ್ಯಕ್ಕೆ ತಕ್ಕಂತೆ 2022-23ನೇ ಸಾಲಿನ ಆಯವ್ಯಯ ಅಂದಾಜುಗಳಲ್ಲಿ ಪರಿಷ್ಕರಣೆ ಮಾಡಿ ಹಣಕಾಸು ಸಮಿತಿ ಸಭೆಯಲ್ಲಿ ಅನುಸಮರ್ಥಿಸಿರುವುದನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2023/2.19 | ಕೃಷ್ಣರಾಜ ಬುಲೇವಾರ್ಡ್ ರಸ್ತೆಗೆ ಅಭಿಮುಖವಾಗಿರುವ ಮಹಾರಾಜ ಕಾಲೇಜಿನ ಕ್ರೀಡಾ ಮೈದಾನದ ಮುಂಭಾಗದಲ್ಲಿ ನಂದಿನಿ ಹಾಲು ಮತ್ತು ಉತ್ಪನ್ನಗಳ ಮಾರಾಟಕ್ಕೆ ಮಿನಿ ಗ್ಯಾಲಕ್ಸಿಯನ್ನು ನಿರ್ಮಿಸಲು ಅವಶ್ಯವಿರುವ 20x20 ಅಡಿ ಜಾಗವನ್ನು ನೀಡುವ ಬಗ್ಗೆ. |
| ತೀರ್ಮಾನ | ಕೃಷ್ಣರಾಜ ಬುಲೇವಾರ್ಡ್ ರಸ್ತೆಗೆ ಅಭಿಮುಖವಾಗಿರುವ ಮಹಾರಾಜ ಕಾಲೇಜಿನ ಕ್ರೀಡಾ ಮೈದಾನದ ಮುಂಭಾಗದ ಸ್ಥಳದಲ್ಲಿ ನಂದಿನಿ ಹಾಲು ಮತ್ತು ಉತ್ಪನ್ನಗಳ ಮಾರಾಟಕ್ಕೆ ಮಿನಿ ಗ್ಯಾಲಕ್ಸಿಯನ್ನು ನಿರ್ಮಿಸಲು ಈ ಕೆಳಕಂಡ ಷರತ್ತುಗಳೊಂದಿಗೆ ಸಭೆಯು ಅನುಮೋದಿಸಿತು. |

| | |
|---|---|
| | 1) ನಂದಿನಿ ಹಾಲು ಮತ್ತು ನಂದಿನಿ ಉತ್ಪನ್ನಗಳನ್ನು ಮಾತ್ರ ಮಾರಾಟ ಮಾಡುವುದು. ಚಹ/ಕಾಫಿ/ತಂಬಾಕು ಇತರೆ ಉತ್ಪನ್ನಗಳ ಮಾರಾಟ ಮಾಡುವುದನ್ನು ನಿಷೇಧಿಸಿದೆ.<br>2) ಕುಕ್ಕರಹಳ್ಳಿ ಕೆರೆ ಹತ್ತಿರವಿರುವ ನಂದಿನಿ ಕ್ಷೀರ ಕೇಂದ್ರಕ್ಕೆ ನೀಡಿರುವ ಜಾಗದ ಅಳತೆಯಂತೆಯೇ ಸದರಿ ಕೇಂದ್ರಕ್ಕೂ ಜಾಗವನ್ನು ನೀಡುವುದು.<br>3) ನಂದಿನಿ ಕ್ಷೀರ ಕೇಂದ್ರದ ಬಾಡಿಗೆ ದರ ನಿಗದಿಗೊಳಸುವುದನ್ನು ಮಾನ್ಯ ಕುಲಪತಿಗಳ ವಿವೇಚಾನಾಧಿಕಾರಕ್ಕೆ ನೀಡಲಾಗಿದೆ. |
| ಸಾಮಾನ್ಯ ಸಭೆ 2023/2.20 | ಯೋಜನೆ, ಉಸ್ತುವಾರಿ ಮತ್ತು ಮೌಲ್ಯಮಾಪನ ಮಂಡಳಿಯ ಸ್ಥಾಪನೆಯ ಸಂಬಂಧ ಕರಡು ಅಧಿನಿಯಮಕ್ಕೆ ಅನುಮೋದನೆ ಕೋರುವ ಬಗ್ಗೆ. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000 ಪ್ರಕರಣ 41ರನ್ವಯ ಯೋಜನೆ, ಉಸ್ತುವಾರಿ ಮತ್ತು ಮೌಲ್ಯಮಾಪನ ಮಂಡಳಿಯ ಸ್ಥಾಪನೆಯ ಸಂಬಂಧ ಸಿದ್ಧಪಡಿಸಲಾಗಿರುವ ಕರಡು ಅಧಿನಿಯಮವನ್ನು ಘನತೆವೆತ್ತ ಕುಲಾಧಿಪತಿಗಳ ಅಂಕಿತಕ್ಕಾಗಿ ರಾಜ್ಯ ಸರ್ಕಾರಕ್ಕೆ ಸಲ್ಲಿಸಲು ಸಿಂಡಿಕೇಟ್ ಸಭೆಯು ತೀರ್ಮಾನಿಸಿತು. |
| ಸಾಮಾನ್ಯ ಸಭೆ 2023/2.21 | Wiztoonz Academy of Media & Design, ಎಂ.ಐ.ಟಿ. ಕ್ಯಾಂಪಸ್, 2ನೇ ಮಹಡಿ, ಪಿ.ಜಿ. ಬ್ಲಾಕ್, ಬೆಳವಾಡಿ, ಶ್ರೀರಂಗಪಟ್ಟಣ ತಾ., ಮಂಡ್ಯ ಜಿಲ್ಲೆ ಇವರ ಸಂಸ್ಥೆಯಲ್ಲಿ Specialized Programme ಅಡಿಯಲ್ಲಿ B.Sc. (Hons.) (Multimedia) ಮತ್ತು M.Sc. (Multimedia Design) ಕೋರ್ಸ್‌ಗಳನ್ನು ಪ್ರಾರಂಭಿಸಲು ಮಾನ್ಯತೆ ನೀಡಿರುವ ಬಗ್ಗೆ–ಅನುಸಮರ್ಥನೆಗಾಗಿ. |
| ತೀರ್ಮಾನ | ಪರಿವೀಕ್ಷಣಾ ಸಮಿತಿಯ ಶಿಫಾರಸ್ಸಿನನ್ವಯ ಮತ್ತು "The University of Mysore-Recognition of Certain institutions for specified studies/ specialized and Research Statutes 2008" ಅಧಿನಿಯಮದಲ್ಲಿರುವ ಅವಕಾಶದನುಸಾರ Wiztoonz Academy of Media & Design, ಎಂ.ಐ.ಟಿ. ಕ್ಯಾಂಪಸ್, 2ನೇ ಮಹಡಿ, ಪಿ.ಜಿ. ಬ್ಲಾಕ್, ಬೆಳವಾಡಿ, ಶ್ರೀರಂಗಪಟ್ಟಣ ತಾ., ಮಂಡ್ಯ ಜಿಲ್ಲೆ ಈ ಸಂಸ್ಥೆಗೆ Specialized Programme ಅಡಿಯಲ್ಲಿ ಹೊಸದಾಗಿ B.Sc. (Hons.) (Multimedia) ಮತ್ತು M.Sc. (Multimedia Design) ಕೋರ್ಸ್‌ಗಳನ್ನು 2023–24ನೇ ಸಾಲಿನಿಂದ ಪ್ರಾರಂಭಿಸಲು ಅನುಮತಿಸಿ ಅಧಿಸೂಚನೆ ಹೊರಡಿಸಿರುವುದನ್ನು ಸಭೆಯು ಅನುಸಮರ್ಥಿಸಿತು. |
| **ಸಾಮಾನ್ಯ ಸಭೆ 2023/2.22** | ಮಾನವಶಾಸ್ತ್ರ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನು ನೇಮಕ ಮಾಡುವ ಬಗ್ಗೆ. |
| | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಪ್ರಕರಣ 34(7)ರ ಪ್ರಕಾರ ಪ್ರೊ. ಎಂ.ಆರ್.ಗಂಗಾಧರ್, ಪ್ರಾಧ್ಯಾಪಕರು, ಮಾನವಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ: 31-03-2023 ರಿಂದ ಜಾರಿಗೆ ಬಂದಂತೆ ಎರಡು ವರ್ಷಗಳ ಅವಧಿಗೆ ಅಥವಾ ನಿವೃತ್ತಿಯ ದಿನಾಂಕದವರೆಗೆ ಅಥವಾ ಮುಂದಿನ ಆದೇಶದವರೆಗೆ, ಇವುಗಳಲ್ಲಿ ಯಾವುದು ಮೊದಲು ಘಟಿಸುವುದೋ ಅಲ್ಲಿಯವರೆಗೆ ಮಾನವಶಾಸ್ತ್ರ ಅಧ್ಯಯನ ವಿಭಾಗದ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿರುತ್ತದೆ. ಆದರೆ ದಿನಾಂಕ: 20-03-2023 ರಂದು ಕರ್ನಾಟಕ ರಾಜ್ಯ ಸರ್ಕಾರವು ಏಳು ಹೊಸ ವಿಶ್ವವಿದ್ಯಾನಿಲಯಗಳಿಗೆ ಕುಲಪತಿಗಳನ್ನು ನೇಮಕ ಮಾಡಿ ಅಧಿಸೂಚನೆ ಹೊರಡಿಸಿರುತ್ತದೆ. ಅದರಲ್ಲಿ ಪ್ರೊ. ಎಂ.ಆರ್.ಗಂಗಾಧರ್, ಪ್ರಾಧ್ಯಾಪಕರು, ಮಾನವಶಾಸ್ತ್ರ ಅಧ್ಯಯನ ವಿಭಾಗ, ಮೈಸೂರು ಇವರನ್ನು ಚಾಮರಾಜನಗರ ವಿಶ್ವವಿದ್ಯಾನಿಲಯಕ್ಕೆ ಕುಲಪತಿಯನ್ನಾಗಿ ನೇಮಕ ಮಾಡಿರುವ ಹಿನ್ನೆಲೆಯಲ್ಲಿ, ಸದರಿ ಅಧ್ಯಯನ ವಿಭಾಗದ ದೈನಂದಿನ ಕೆಲಸ ಕಾರ್ಯಗಳು ಸುಲಲಿತವಾಗಿ ನಡೆಸಲು ಅಧ್ಯಕ್ಷರನ್ನು ನೇಮಕ ಮಾಡಬೇಕಾಗಿರುತ್ತದೆ. |

| | |
|---|---|
| | ಮಾನವಶಾಸ್ತ್ರ ಅಧ್ಯಯನ ವಿಭಾಗದಲ್ಲಿ ಬೇರೆ ಯಾರೂ ಖಾಯಂ ಪ್ರಾಧ್ಯಾಪಕರಾಗಲೀ/ ಸಹ ಪ್ರಾಧ್ಯಾಪಕರಾಗಲೀ/ಸಹಾಯಕ ಪ್ರಾಧ್ಯಾಪಕರಾಗಲೀ ಕಾರ್ಯನಿರ್ವಹಿಸುತ್ತಿರುವು ದಿಲ್ಲವೆಂಬುದನ್ನು ಸಿಂಡಿಕೇಟ್ ಗಮನಿಸಿತು. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಪ್ರಕರಣ 34(7)ರ ಪ್ರಕಾರ ಮಾನವಶಾಸ್ತ್ರ ಅಧ್ಯಯನ ವಿಭಾಗದ ದೈನಂದಿನ ಕೆಲಸಕಾರ್ಯಗಳು ಸುಲಲಿತವಾಗಿ ನಡೆಯಲು ಡಾ. ಕೆ.ಪ್ರಭು, ಸಹಾಯಕ ಪ್ರಾಧ್ಯಾಪಕರು, ಪ್ರಾಚೀನ ಇತಿಹಾಸ ಹಾಗೂ ಪುರಾತತ್ವ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ಈ ತಕ್ಷಣದಿಂದ ಜಾರಿಗೆ ಬಂದಂತೆ ಅಥವಾ ಮುಂದಿನ ಆದೇಶದವರೆಗೆ ಮಾನವಶಾಸ್ತ್ರ ಅಧ್ಯಯನ ವಿಭಾಗದ ಪ್ರಭಾರ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸಭೆಯಲ್ಲಿ ತೀರ್ಮಾನಿಸಲಾಯಿತು. |
| **ಸಾಮಾನ್ಯ ಸಭೆ 2023/2.23** | 2022-23ನೇ ಶೈಕ್ಷಣಿಕ ಸಾಲಿನ ಪ್ರಥಮ ವರ್ಷದ ಎಂ.ಎಸ್‌ಸಿ ಮನೋವಿಜ್ಞಾನ ಪ್ರೋಗ್ರಾಂಗೆ ವರ್ಗಾವಣೆ ಪ್ರವೇಶಾತಿ ನೀಡಿರುವ ಬಗ್ಗೆ. |
| | ಶ್ರೀ ಎಂ.ಬಿ. ಗಪ್ಪಣ್ಣ ಅವರು ಮಾತನಾಡಿ, ಮೈಸೂರು ವಿಶ್ವವಿದ್ಯಾನಿಲಯದ ಕೆಲವು ವಿಭಾಗಗಳಲ್ಲಿ ಖಾಲಿ ಇರುವ ಸೀಟುಗಳನ್ನು ಭರ್ತಿ ಮಾಡಬಹುದು. ಹಾಗೆಯೇ ವಿಶ್ವವಿದ್ಯಾನಿಲಯ ಇಂಜಿನಿಯರಿಂಗ್ ಕಾಲೇಜಿನಲ್ಲಿಯೂ ಉಳಿದಿರುವ ಸೀಟುಗಳಿಗೆ ಪ್ರವೇಶಾತಿ ಮಾಡಿಕೊಳ್ಳುವುದರಿಂದ ವಿದ್ಯಾರ್ಥಿಗಳಿಗೆ ಅನುಕೂಲವಾಗುತ್ತದೆಂದು ತಿಳಿಸಿದರು.<br>ಈ ಸಂಬಂಧ ಮಾನ್ಯ ಕುಲಪತಿಗಳು ಮಾತನಾಡಿ, ವಿದ್ಯಾರ್ಥಿಗಳ ಪ್ರವೇಶಾತಿ ದಿನಾಂಕ ಮತ್ತು ಡೇಟಾಗಳು UUCMSನಲ್ಲಿ entry ಆಗುವುದರಿಂದ ಅಂತಿಮ ದಿನಾಂಕದ ನಂತರ ಪ್ರವೇಶಾತಿ ಮಾಡಲಾಗುವುದಿಲ್ಲವೆಂದರು. |
| ತೀರ್ಮಾನ | 2022-23ನೇ ಶೈಕ್ಷಣಿಕ ಸಾಲಿಗೆ ಮಾತ್ರ ಅನ್ವಯವಾಗುವಂತೆ ಶ್ರೀ ಕೆಂಚೇಗೌಡ ಬಿ.ಎಲ್ ಮತ್ತು ಶ್ರೀ ಅಭಿಷೇಕ್.ಎಂ.ಬಿ ಎಂಬ ಈ ಇಬ್ಬರು ವಿದ್ಯಾರ್ಥಿಗಳಿಗೆ ಸ್ಕೀಂ 'ಎ' ಅಡಿಯಲ್ಲಿ ಪ್ರಥಮ ವರ್ಷದ ಎಂ.ಎಸ್ಸಿ ಮನೋವಿಜ್ಞಾನ ಪ್ರೋಗ್ರಾಂಗೆ ವರ್ಗಾವಣೆ ಮಾಡಿ ಪ್ರವೇಶಾತಿ ಮಾಡಿಕೊಂಡಿರುವುದನ್ನು ಸಭೆಯು ಅನುಸಮರ್ಥಿಸಿತು. |
| **ಸಾಮಾನ್ಯ ಸಭೆ 2023/2.24** | 2023ನೇ ಕ್ಯಾಲೆಂಡರ್ ವರ್ಷದಲ್ಲಿ ವಯೋಮಾನ ತಲುಪುವ ಅಧ್ಯಾಪಕ ನೌಕರರಿಗೆ ಸೇವೆಯಿಂದ ವಯೋನಿವೃತ್ತಿ ಹೊಂದಲು ಅನುಮತಿ ನೀಡುವ ಬಗ್ಗೆ. |
| ತೀರ್ಮಾನ | 2023ನೇ ಕ್ಯಾಲೆಂಡರ್ ವರ್ಷದಲ್ಲಿ ವಯೋಮಾನ ತಲುಪುವ ಅಧ್ಯಾಪಕ ನೌಕರರಿಗೆ ಸೇವೆಯಿಂದ ವಯೋನಿವೃತ್ತಿ ಹೊಂದಲು ಸಭೆಯು ಅನುಮತಿಸಿತು. |
| **ಸಾಮಾನ್ಯ ಸಭೆ 2023/2.25** | ಡಾ. ಎಸ್. ಮಸೂದ್ ಸಿರಾಜ್, ನಿವೃತ್ತ ಪ್ರಾಧ್ಯಾಪಕರು, ಉರ್ದು ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ಸಂದರ್ಶಕ ಪ್ರಾಧ್ಯಾಪಕರನ್ನಾಗಿ ನೇಮಿಸಿರುವ ಬಗ್ಗೆ. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000 ರ ಪ್ರಕರಣ 53(10)ರಲ್ಲಿರುವ ಅವಕಾಶದನುಸಾರ, ಡಾ. ಎಸ್. ಮಸೂದ್ ಸಿರಾಜ್, ನಿವೃತ್ತ ಪ್ರಾಧ್ಯಾಪಕರು, ಉರ್ದು ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ಉರ್ದು ಅಧ್ಯಯನ ವಿಭಾಗಕ್ಕೆ ಸಂದರ್ಶಕ ಪ್ರಾಧ್ಯಾಪಕರಾಗಿ ಆಹ್ವಾನಿಸಿರುವುದನ್ನು ಸಿಂಡಿಕೇಟ್ ಸಭೆಯು ಅನುಸಮರ್ಥಿಸಿತು. |
| **ಸಾಮಾನ್ಯ ಸಭೆ 2023/2.26** | ಮೈಸೂರು ವಿಶ್ವವಿದ್ಯಾನಿಲಯದ ಅಧಿಕಾರಿ ವರ್ಗದ ಮತ್ತು ಅಧ್ಯಾಪಕೇತರ ವೃಂದದ ನೇಮಕಾತಿ ನಿಯಮಗಳ ಅಧಿನಿಯಮದಲ್ಲಿ ಉಪಕುಲಸಚಿವ ಹುದ್ದೆಯ ವೇತನ ಶ್ರೇಣಿಯನ್ನು ತಿದ್ದುಪಡಿ ಮಾಡುವ ಕುರಿತು. |

| | |
|---|---|
| | ಮಾನ್ಯ ಕುಲಸಚಿವರು ಮಾತನಾಡಿ, ಮೈಸೂರು ವಿಶ್ವವಿದ್ಯಾನಿಲಯದ ಅಧಿಕಾರಿ ವರ್ಗದ ಮತ್ತು ಅಧ್ಯಾಪಕೇತರ ವೃಂದದ ನೇಮಕಾತಿ ನಿಯಮಗಳ ಅಧಿನಿಯಮವನ್ನು ಪುನರ್‌ರಚಿಸಿ ಈಗಾಗಲೇ ಘನತೆವೆತ್ತ ಕುಲಾಧಿಪತಿಗಳಿಂದ ಅನುಮೋದನೆ ಪಡೆಯಲಾಗಿದೆ. ಪ್ರಸ್ತುತ ರಾಜ್ಯಸರ್ಕಾರದ ಹಣಕಾಸು ಇಲಾಖೆಯು ಮೈಸೂರು ವಿಶ್ವವಿದ್ಯಾನಿಲಯದ ಅಧಿಕಾರಿ ವರ್ಗದ ಮತ್ತು ಅಧ್ಯಾಪಕೇತರ ವೃಂದದ ನೇಮಕಾತಿ ನಿಯಮಗಳ ಅಧಿನಿಯಮದಲ್ಲಿ ಉಪಕುಲಸಚಿವ ಹುದ್ದೆಗೆ ಪ್ರಸ್ತಾಪಿಸಿರುವ ವೇತನ ಶ್ರೇಣಿಯಾದ ರೂ. ರೂ.74400-109600ಕ್ಕೆ ಆಕ್ಷೇಪಿಸಿರುವುದರಿಂದ, ಈ ಹಿಂದೆ ಉಪಕುಲಸಚಿವ ಹುದ್ದೆಗೆ ನಿಗದಿಪಡಿಸಿರುವ ವೇತನ ಶ್ರೇಣಿಯಾದ ರೂ.67550-104600 ಗಳನ್ನು ತಿದ್ದುಪಡಿ ಮಾಡಿ, ಪರಿಷ್ಕೃತ ಕರಡು ಅಧಿನಿಯಮವನ್ನು ಸರ್ಕಾರಕ್ಕೆ ಸಲ್ಲಿಸಬೇಕಾಗಿದೆ. ಪರಿಷ್ಕೃತ ಕರಡು ಅಧಿನಿಯಮಕ್ಕೆ ಸರ್ಕಾರದ ಶಿಕ್ಷಣ ಇಲಾಖೆಯು ಘನತೆವೆತ್ತ ರಾಜ್ಯಪಾಲರ ಅಂಕಿತ ದೊರಕಿಸಿಕೊಟ್ಟಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಉಪಕುಲಸಚಿವ ಹುದ್ದೆಗೆ ಪದೋನ್ನತಿ ನೀಡಲು ಅವಕಾಶವಾಗುವುದೆಂದು ತಿಳಿಸಿದರು. |
| ತೀರ್ಮಾನ | ಮೈಸೂರು ವಿಶ್ವವಿದ್ಯಾನಿಲಯದ ಅಧಿಕಾರಿ ವರ್ಗದ ಮತ್ತು ಅಧ್ಯಾಪಕೇತರ ವೃಂದದ ನೇಮಕಾತಿ ನಿಯಮಗಳ ಅಧಿನಿಯಮದಲ್ಲಿನ ಕ್ರಮ ಸಂಖ್ಯೆ 05ರಲ್ಲಿ ತಿಳಿಸಿರುವ ಉಪಕುಲಸಚಿವ ಹುದ್ದೆಯ ವೇತನ ಶ್ರೇಣಿಯನ್ನು ರೂ.74400-109600ಕ್ಕೆ ಬದಲಾಗಿ ರೂ.67550-104600 ಗಳನ್ನು ತಿದ್ದುಪಡಿ ಮಾಡಿರುವ ಪರಿಷ್ಕೃತ ಕರಡು ಅಧಿನಿಯಮವನ್ನು ಸರ್ಕಾರಕ್ಕೆ ಸಲ್ಲಿಸಲು ಸಭೆಯು ಅನುಮೋದಿಸಿತು. |
| **ಸಾಮಾನ್ಯ ಸಭೆ 2023/2.27** | ಹೆಚ್ಚುವರಿ ದೂರವಾಣಿ ಸಂಪರ್ಕಗಳನ್ನು ರದ್ದುಪಡಿಸುವ ಬಗ್ಗೆ. |
| ತೀರ್ಮಾನ | ವಿಶ್ವವಿದ್ಯಾನಿಲಯದ ವಿವಿಧ ವಿಭಾಗಗಳು/ಕೇಂದ್ರಗಳು/ಕಾಲೇಜುಗಳು ಹಾಗೂ ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿರುವ ಎಲ್ಲಾ ಆಡಳಿತ ಕಛೇರಿಗಳಲ್ಲಿ ಅಗತ್ಯವಿರುವ ದೂರವಾಣಿ ಸಂಪರ್ಕಗಳನ್ನು ಹೊರತುಪಡಿಸಿ, ಉಳಿದ ಹೆಚ್ಚುವರಿ ದೂರವಾಣಿ ಸಂಪರ್ಕಗಳನ್ನು ರದ್ದುಗೊಳಿಸಲು ಸಭೆಯು ಅನುಮೋದಿಸಿತು. |
| **ಸಾಮಾನ್ಯ ಸಭೆ 2023/2.28** | "Prof. Khyrunnissa Begum Endowment Cash Prize" ದತ್ತಿ ಸ್ಥಾಪನೆ ಮಾಡುವ ಬಗ್ಗೆ. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000ರ ಅನ್ವಯ ಪ್ರಕರಣ 29(2)(r) ಪ್ರಕಾರ ದಾನಿಗಳು ದತ್ತಿಯ ನಿಬಂಧನೆಯಲ್ಲಿ ತಿಳಿಸಿರುವಂತೆ, ಪ್ರತಿ ವರ್ಷ ಸದರಿ ದತ್ತಿಯ ಮೂಲಧನಕ್ಕೆ ಕ್ರೋಢಿಕೃತವಾಗುವ ಬಡ್ಡಿಯ ಹಣದಲ್ಲಿ ಶೇ.20 ರಷ್ಟನ್ನು ಮೂಲಧನಕ್ಕೆ ಸೇರಿಸಿ, ಉಳಿದ ಶೇ.80 ರಷ್ಟು ಬಡ್ಡಿಯ ಹಣವನ್ನು M.Sc. in Food Science and Nutrition Steam-I ನ ಎಲ್ಲಾ ಸೆಮಿಸ್ಟರ್‌ನ ಪರೀಕ್ಷೆಯಲ್ಲಿ 2ನೇ ಅತಿ ಹೆಚ್ಚು ಅಂಕ ಗಳಿಸಿದ ಹಾಗೂ 2ನೇ ರ್‍ಯಾಂಕ್ ಪಡೆದು, ಮೊದಲನೇ ಪ್ರಯತ್ನದಲ್ಲಿ ಉತ್ತೀರ್ಣರಾದಂತಹ ವಿದ್ಯಾರ್ಥಿಗೆ ವಿಶ್ವವಿದ್ಯಾನಿಲಯದಲ್ಲಿ "Prof. Khyrunnissa Begum Endowment Cash Prize" ದತ್ತಿ ಸ್ಥಾಪಿಸಿಲು ಸಭೆಯು ಅನುಮೋದಿಸಿತು. |
| **ಸಾಮಾನ್ಯ ಸಭೆ 2023/2.29** | ಚಿನ್ನದ ಪದಕ/ನಗದು ಬಹುಮಾನಗಳನ್ನು ಅತಿ ಹೆಚ್ಚು ಅಂಕ ಅಥವಾ ಅತಿ ಹೆಚ್ಚು CGPA ಪಡೆದಿರುವ ವಿದ್ಯಾರ್ಥಿಗೆ ನೀಡಬೇಕೆ ಎಂಬುದರ ಬಗೆಗೆ. |
| ತೀರ್ಮಾನ | ಮೈಸೂರು ವಿಶ್ವವಿದ್ಯಾನಿಲಯದ ವಾರ್ಷಿಕ ಘಟಿಕೋತ್ಸವದಲ್ಲಿ ಚಿನ್ನದ ಪದಕ/ನಗದು ಬಹುಮಾನಗಳನ್ನು ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರದಾನ ಮಾಡಲು ಸಭೆಯು ಅನುಮೋದಿಸಿತು. |

| | |
|---|---|
| **ಸಾಮಾನ್ಯ ಸಭೆ 2023/2.30** | ಶ್ರೀ ಎಂ.ಬಿ. ಗಪ್ಪಣ್ಣ, ಮಾನ್ಯ ಸಿಂಡಿಕೇಟ್ ಸದಸ್ಯರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರು ಮೈಸೂರು ವಿಶ್ವವಿದ್ಯಾನಿಲಯದ ವಾಹನಗಳ ಮಾಸಿಕ ಇಂಧನ ವೆಚ್ಚ ಮತ್ತು ನಿರ್ವಹಣಾ ವೆಚ್ಚದ ವಿವರವನ್ನು ಕೋರಿರುವ ಬಗ್ಗೆ. |
| ತೀರ್ಮಾನ | ಮೈಸೂರು ವಿಶ್ವವಿದ್ಯಾನಿಲಯದ ವಾಹನಗಳ ಮಾಸಿಕ ಇಂಧನ ವೆಚ್ಚ ಮತ್ತು ನಿರ್ವಹಣಾ ವೆಚ್ಚದ ವಿವರಗಳನ್ನು ಸಿಂಡಿಕೇಟ್ ಸಭೆಯು ಗಮನಿಸಿತು. |
| **ಸಾಮಾನ್ಯ ಸಭೆ 2023/2.31** | 2023-24ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಸಂಶೋಧನಾ ವಿದ್ಯಾರ್ಥಿಗಳ ಶಿಷ್ಯವೇತನ ನೀಡುವ ಬಗ್ಗೆ. |
| ತೀರ್ಮಾನ | 2022-23ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಸಂಶೋಧನೆಗಾಗಿ ಅಧಿಸೂಚನೆಯನ್ನು ಹೊರಡಿಸಲು ಹಾಗೂ ಮೈಸೂರು ವಿಶ್ವವಿದ್ಯಾನಿಲಯದ ಹಿಂದುಳಿದ ವರ್ಗಗಳ ಘಟಕದ ಸಂಶೋಧನಾ ವಿದ್ಯಾರ್ಥಿಗಳಿಗೆ ಶಿಷ್ಯವೇತನವನ್ನು ಹೆಚ್ಚಿಸುವ ಮತ್ತು ಸಂಖ್ಯೆಯನ್ನು ನಿಗದಿಪಡಿಸುವ ಸಂಬಂಧ 2023-24ನೇ ಸಾಲಿನ ವಿಶ್ವವಿದ್ಯಾನಿಲಯದ ಒಟ್ಟಾರೆ ಆಯವ್ಯಯ ಅಂದಾಜುಗಳನ್ನು ಪರಿಶೀಲಿಸಿದ ನಂತರ ಮುಂದಿನ ಕ್ರಮ ತೆಗೆದುಕೊಳ್ಳಲು ಸಭೆಯಲ್ಲಿ ತೀರ್ಮಾನಿಸಲಾಯಿತು. |
| **ಸಾಮಾನ್ಯ ಸಭೆ 2023/2.32** | 2022-23ನೇ ಸಾಲಿಗೆ ರಚನೆಗೊಂಡಿರುವ ವಿವಿಧ ನಿಕಾಯಗಳ-ವಿವಿಧ ವಿಷಯಗಳ ಪರೀಕ್ಷಾ ಮಂಡಳಿಗಳಿಗೆ (UG/PG) ಅನುಸಮರ್ಥನೆ ನೀಡುವ ಕುರಿತು. |
| ತೀರ್ಮಾನ | Board of Appointment of Examiners (BOAE) ಸಭೆಗಳಲ್ಲಿ 2022-23ನೇ ಸಾಲಿಗೆ ರಚನೆಗೊಂಡಿರುವ ವಿವಿಧ ನಿಕಾಯಗಳ-ವಿವಿಧ ವಿಷಯಗಳ ಪರೀಕ್ಷಾ ಮಂಡಳಿಗಳಿಗೆ (UG/PG) KSU Act, 2000 ಕಲಂ 36(5) ಮತ್ತು (6) ಅನುಸಾರ ಪರೀಕ್ಷಾ ಕಾರ್ಯಗಳ ಹಿತದೃಷ್ಟಿಯಿಂದ ಈ ಕೆಳಕಂಡ ಪರೀಕ್ಷಾ ಮಂಡಳಿಗಳಿಗೆ (UG/PG) ಅಧ್ಯಕ್ಷರು/ ಸದಸ್ಯರುಗಳನ್ನು ಮಾನ್ಯ ಕುಲಪತಿಯವರ ಅನುಮೋದನೆ ಮೇರೆಗೆ ಬದಲಿ/ಹೆಚ್ಚುವರಿ ಮಾಡಿ ಆದೇಶ ಹೊರಡಿಸಿರುವುದನ್ನು ಸಭೆಯು ಅನುಸಮರ್ಥಿಸಿತು.<br>* ಅರ್ಥಶಾಸ್ತ್ರ ಪರೀಕ್ಷಾ ಮಂಡಳಿ (ಸ್ನಾತಕ)<br>* ರಸಾಯನಶಾಸ್ತ್ರ ಪರೀಕ್ಷಾ ಮಂಡಳಿ (ಸ್ನಾತಕ)<br>* ಹಿಂದಿ ಪರೀಕ್ಷಾ ಮಂಡಳಿ (ಸ್ನಾತಕ)<br>* ಭೌತಶಾಸ್ತ್ರ ಪರೀಕ್ಷಾ ಮಂಡಳಿ (ಸ್ನಾತಕ)<br>* ಪತ್ರಿಕೋದ್ಯಮ ಮತ್ತು ಸಂವಹನ ಪರೀಕ್ಷಾ ಮಂಡಳಿ (ಸ್ನಾತಕ)<br>* ಇಂಗ್ಲೀಷ್ ಪರೀಕ್ಷಾ ಮಂಡಳಿ (ಸ್ನಾತಕ)<br>* ಬಿಬಿಎಂ/ಬಿಬಿಎ ಪರೀಕ್ಷಾ ಮಂಡಳಿ (ಸ್ನಾತಕ)<br>* ಕನ್ನಡ ಪರೀಕ್ಷಾ ಮಂಡಳಿ (ಸ್ನಾತಕ)<br>* ಉರ್ದು ಪರೀಕ್ಷಾ ಮಂಡಳಿ (ಸ್ನಾತಕ)<br>* ಗಣಿತಶಾಸ್ತ್ರ ಪರೀಕ್ಷಾ ಮಂಡಳಿ (ಸ್ನಾತಕ) |
| **ಸಾಮಾನ್ಯ ಸಭೆ 2023/2.33** | ಮೈಸೂರು ವಿಶ್ವವಿದ್ಯಾನಿಲಯದ ಕುಕ್ಕರಹಳ್ಳಿ ಕೆರೆ ಮೀನು ಪಾಶುವಾರು ಗುತ್ತಿಗೆ ಹಕ್ಕನ್ನು ನೀಡುವ ಬಗ್ಗೆ. |
| | ಡಾ. ಚೈತ್ರ ನಾರಾಯಣ ಅವರು ಮಾತನಾಡಿ, ಸುಮಾರು ಮೂರು ವರ್ಷದಿಂದ ಮೈಸೂರು ವಿಶ್ವವಿದ್ಯಾನಿಲಯದ ಕುಕ್ಕರಹಳ್ಳಿ ಕೆರೆ ಮೀನು ಪಾಶುವಾರು ಗುತ್ತಿಗೆ ಹಕ್ಕನ್ನು ಯಾರಿಗೂ ನೀಡಿಲ್ಲದ ಕಾರಣ, ವರ್ಷಕ್ಕೆ 6-7 ಲಕ್ಷ ಆದಾಯ ನಷ್ಟವಾಗುತ್ತಿದೆ. ಆದ್ದರಿಂದ ವಿಶ್ವವಿದ್ಯಾನಿಲಯವು ಕೂಡಲೇ ಕುಕ್ಕರಹಳ್ಳಿ ಕೆರೆ ಮೀನು ಪಾಶುವಾರು ಗುತ್ತಿಗೆ ಹಕ್ಕನ್ನು ನೀಡುವುದರ ಬಗ್ಗೆ ಆದೇಶ ಹೊರಡಿಸಬೇಕೆಂದು ತಿಳಿಸಿದರು. |

| | |
|---|---|
| | ಮಾನ್ಯ ಕುಲಪತಿಗಳು ಮಾತನಾಡಿ, ಮೈಸೂರು ವಿಶ್ವವಿದ್ಯಾನಿಲಯದ ಕುಕ್ಕರಹಳ್ಳಿ ಕೆರೆ ಮೀನು ಪಾಶುವಾರು ಗುತ್ತಿಗೆ ಹಕ್ಕನ್ನು ಅನೇಕ ವರ್ಷಗಳಿಂದ ಇ-ಟೆಂಡರ್ ಆಹ್ವಾನಿಸದೇ ಕರ್ನಾಟಕ ರಾಜ್ಯ ಸಹಕಾರಿ ಮೀನುಗಾರಿಕೆ ಮಹಾಮಂಡಳ(ನಿ), ಮೈಸೂರು ಇವರಿಗೆ ವಿಸ್ತರಿಸಲಾಗಿದೆ. ಇವರು ವಿಶ್ವವಿದ್ಯಾನಿಲಯಕ್ಕೆ 2-3 ಲಕ್ಷ ಮೊತ್ತವನ್ನು ಪಾವತಿ ಮಾಡಬೇಕಾಗಿರುವುದು ಕಂಡುಬಂದಿದೆ. ವಿಶ್ವವಿದ್ಯಾನಿಲಯಕ್ಕೆ ಪಾವತಿ ಮಾಡಬೇಕಾಗಿರುವ ಬೇಬಾಕಿ ಮೊತ್ತವನ್ನು ಪಾವತಿಸಿದಲ್ಲಿ, ಮುಂದಿನ ಆರು ತಿಂಗಳು ಗುತ್ತಿಗೆ ಹಕ್ಕನ್ನು ನೀಡಲು ಆದೇಶವನ್ನು ಹೊರಡಿಸಲಾಗುವುದು. ತದನಂತರ ಇ-ಟೆಂಡರ್ ಮುಖಾಂತರ ಪ್ರಕಟಣೆ ಹೊರಡಿಸಿ ಆಹ್ವಾನಿಸಲಾಗುವುದು ಎಂದು ತಿಳಿಸಿದರು.<br><br>ಶ್ರೀ ಎಂ.ಬಿ.ಗಪ್ಪಣ್ಣ ಅವರು ಮಾತನಾಡಿ, ಒಂದು ವೇಳೆ ಬೇಬಾಕಿ ಏನಾದರೂ ಇದ್ದರೆ ಕರ್ನಾಟಕ ರಾಜ್ಯ ಸಹಕಾರಿ ಮೀನುಗಾರಿಕೆ ಮಹಾಮಂಡಳ(ನಿ), ಮೈಸೂರು ಅವರು ವಿಶ್ವವಿದ್ಯಾನಿಲಯಕ್ಕೆ ಪಾವತಿಸಿದ ನಂತರ ಈ ವರ್ಷದ ಅಂತ್ಯದವರೆಗೂ (ದಿನಾಂಕ: 31-12-2023 ರವರೆಗೆ) ಕುಕ್ಕರಹಳ್ಳಿ ಕೆರೆ ಮೀನು ಪಾಶುವಾರು ಗುತ್ತಿಗೆ ಹಕ್ಕನ್ನು ನೀಡುವ ಆದೇಶ ಹೊರಡಿಸಬಹುದೆಂದರು. |
| ತೀರ್ಮಾನ | ಮೈಸೂರು ವಿಶ್ವವಿದ್ಯಾನಿಲಯದ ಕುಕ್ಕರಹಳ್ಳಿ ಕೆರೆ ಮೀನು ಪಾಶುವಾರು ಗುತ್ತಿಗೆ ಹಕ್ಕನ್ನು ನೀಡುವ ಸಂಬಂಧ ಈ ಕೆಳಕಂಡ ಷರತ್ತುಗಳನ್ವಯ ಗುತ್ತಿಗೆ ಹಕ್ಕನ್ನು ನೀಡಲು ಸಭೆಯಲ್ಲಿ ನಿರ್ಣಯಿಸಲಾಯಿತು.<br>❖ ಕರ್ನಾಟಕ ರಾಜ್ಯ ಸಹಕಾರಿ ಮೀನುಗಾರಿಕೆ ಮಹಾಮಂಡಳ(ನಿ), ಮೈಸೂರು ಇವರು ವಿಶ್ವವಿದ್ಯಾನಿಲಯಕ್ಕೆ ಪಾವತಿಸಬೇಕಾದ ಬೇಬಾಕಿ ಮೊತ್ತವನ್ನು ಪಾವತಿಸಿಕೊಳ್ಳುವುದು.<br>❖ ಬೇಬಾಕಿ ಮೊತ್ತವನ್ನು ಪಾವತಿಸಿದ ನಂತರ ಕರ್ನಾಟಕ ರಾಜ್ಯ ಸಹಕಾರಿ ಮೀನುಗಾರಿಕೆ ಮಹಾಮಂಡಳ(ನಿ), ಮೈಸೂರು ಇವರಿಗೆ ಡಿಸೆಂಬರ್ 2023ರ ಅಂತ್ಯದವರೆಗೆ ಕುಕ್ಕರಹಳ್ಳಿ ಕೆರೆ ಮೀನು ಪಾಶುವಾರು ಗುತ್ತಿಗೆ ಹಕ್ಕನ್ನು ನೀಡಲು ಆದೇಶ ಹೊರಡಿಸಲಾಗುವುದು.<br>❖ ಆರು ತಿಂಗಳ ನಂತರ ಇ-ಟೆಂಡರ್ ಮುಖಾಂತರ ಟೆಂಡರ್ ಆಹ್ವಾನಿಸಲು ಕ್ರಮಕೈಗೊಳ್ಳುವುದು. |

ಅಂತಿಮವಾಗಿ, ಕುಲಸಚಿವರು ಮೈಸೂರು ವಿಶ್ವವಿದ್ಯಾನಿಲಯಕ್ಕೆ ಹೊಸದಾಗಿ ನೇಮಕಗೊಂಡು ಮೊದಲ ಸಿಂಡಿಕೇಟ್ ಸಭೆಯಲ್ಲಿ ಉಪಸ್ಥಿತರಿದ್ದ ಮಾನ್ಯ ಕುಲಪತಿಯವರಾದ ಪ್ರೊ. ಎನ್.ಕೆ. ಲೋಕನಾಥ್ ಅವರಿಗೆ ಹೂಗುಚ್ಛ ನೀಡಿ, ಸಭೆಯಲ್ಲಿ ಮುಕ್ತವಾಗಿ ಚರ್ಚಿಸಿ, ಸೂಕ್ತ ನಿರ್ಣಯಗಳನ್ನು ತೆಗೆದುಕೊಳ್ಳಲು ಸಹಕರಿಸಿದ ಅಧಿಕಾರಿಗಳು/ಸದಸ್ಯರುಗಳಿಗೆ ವಂದನೆಗಳನ್ನರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

**ಕುಲಸಚಿವೆ ಹಾಗೂ ಸದಸ್ಯ ಕಾರ್ಯದರ್ಶಿ** **ಕುಲಪತಿ ಹಾಗೂ ಅಧ್ಯಕ್ಷರು**